# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಕಷ್ಟ ಬಂತೆಂದು ಅತ್ತರೆ ನಾಟಕ ಎನ್ನುವರು
ಸುಖದಲ್ಲಿದ್ದೇನೆಂದು ನಕ್ಕರೆ ಹುಚ್ಚ ಎನ್ನುವರು
ಗೌರವಕ್ಕಾಗಿ ಮೌನವಾದರೆ ತಪ್ಪಿತಸ್ಥ ಎನ್ನುವರು
ಪರರಿಗೆ ನೆರವಾದರೆ ಅಧಿಕಪ್ರಸಂಗಿ ಎನ್ನುವರು
ಸಹವಾಸ ಸಾಕೆಂದರೆ ಅಹಂಕಾರಿ ಎನ್ನುವರು
ಸತ್ತವರನ್ನು ಬದುಕಿಸುವಂತೆ ಮಾಡುವರು
ಬದುಕಿದವರನ್ನು ಸಾಯಿಸಿಯೇ ಬಿಡುವರು
ಇದ್ದಾಗ ನಗುವರು.. ಹೋದಾಗ ಅಳುವರು
ಇದೆಲ್ಲವ ಬಿಟ್ಟು ಬಾಳಿದರೆ ಮನುಜನಾಗುವರು..
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 25-04-2025 to 01-05-2025 ಬೆಲೆ: 7-00 ಸಂಪುಟ–4 ಸಂಚಿಕೆ–44 ಪುಟಗಳು–6












ಕಾಶ್ಮೀರದ ಪಹಲ್ಗಾಮ್ ನಡೆದ ಭಯೋತ್ಪಾದಕರ ದಾಳಿ ಭಾರತವನ್ನು ಮಾತ್ರವಲ್ಲದೇ ಇಡೀ ವಿಶ್ವವನ್ನೇ ಬೆಚ್ಚಿ ಬೀಳಿಸಿದೆ. ಇಂತಹ ದುರ್ಘಟನೆಗಳು ನಡೆಯದಂತೆ ತಡೆಯಬೇಕಾದರೆ, ಇಂತಹ ಕೆಟ್ಟ ಹುಳಗಳಿಗೆ ಒಳಗೊಳಗೆ ಸಹಕಾರ ನೀಡುವವರು ಬುದ್ಧಿ ಕಲಿಯಬೇಕು. ಜನತೆಯ ನಡುವೆ ಉಪಕಾರಿಗಳಂತೆ ವರ್ತಿಸಿ, ಒಳಗೊಳಗೆ ಇಂತಹ ಪಾಪಿಗಳಿಗೆ ಸಹಕಾರ ಕೊಡುವುದರಿಂದ ಮಾತ್ರ ಇಂತಹ ದುರ್ಘಟನೆಗಳು ನಡೆಯಲು ಸಾಧ್ಯ. ಇಂದು ಎಲ್ಲೋ, ಯಾರಿಗೋ ಆದ ಅಪಾಯ ನಮ್ಮ ಸನ್ನಿಹಿತವಾಗುವ ಕ್ಷಣ ದೂರವಿಲ್ಲ ಎನ್ನುವುದನ್ನು ಮರೆಯಬಾರದು. ಸರ್ವ ಜನಾಂಗದ ಶಾಂತಿಯ ತೋಟ ಎನ್ನುವ ಭಾವನೆ ಕೇವಲ ಒಂದು ವರ್ಗಕ್ಕೆ ಮಾತ್ರ ಮೀಸಲಿಟ್ಟರೆ ಸಾಲದು.

## ಪ್ರತ್ಯುತ್ತರ ನೀಡಿಯೇ ನೀಡುತ್ತೇವೆ –ರಾಜನಾಥ್ ಸಿಂಗ್



**ನವದೆಹಲಿ:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಅಪರಾಧಿಗಳು ಮತ್ತು ಸಂಚುಕೋರರಿಗೆ ಭಾರತವು ಗಟ್ಟಿಯಾದ ಮತ್ತು ಸ್ಪಷ್ಟವಾದ ಪ್ರತ್ಯುತ್ತರವನ್ನು ನೀಡಿಯೇ ನೀಡುತ್ತೇವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬುಧವಾರ ಎಚ್ಚರಿಕೆ ರವಾನಿಸಿದ್ದಾರೆ. ಮಂಗಳವಾರ ಪಹಲ್ಗಾಮ್ ಬೈಸರನ್ ಹುಲ್ಲುಗಾವಲಿನಲ್ಲಿ ಪಾಕಿಸ್ತಾನ ಮೂಲದ ಶಂಕಿತ ಭಯೋತ್ಪಾದಕರು 26 ಪುರುಷ ಪ್ರವಾಸಿಗರನ್ನು ಗುಂಡಿಕ್ಕಿ ಕೊಂದು ಹಾಕಿದ್ದಾರೆ. ಇದರಲ್ಲಿ ನಾವು ಅನೇಕ ಮುಗ್ಧ ಜೀವಗಳನ್ನು ಕಳೆದುಕೊಂಡಿದ್ದೇವೆ. ಸರ್ಕಾರವು **3ನೇ ಪುಟಕ್ಕೆ**

## ಉಗ್ರರ ದಾಳಿ ಪ್ರಪಂಚಕ್ಕೇ ದೊಡ್ಡ ಆಘಾತ –ಡಿ.ಕೆ.ಶಿ

**ಬೆಂಗಳೂರು:** ಕಾಶ್ಮೀರದಲ್ಲಿನ ಉಗ್ರರ ದಾಳಿ ಇಡೀ ಪ್ರಪಂಚಕ್ಕೆ ದೊಡ್ಡ ಆಘಾತ. ಈ ಭಯೋತ್ಪಾದಕ ದಾಳಿಯನ್ನು ನಾವು ಖಂಡಿಸುತ್ತೇವೆ. ಈ ಉಗ್ರರು ಹಾಗೂ ಭಯೋತ್ಪಾದಕ ಸಂಘಟನೆಗಳನ್ನು ಸದೆಬಡಿಯಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾವು ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಬೇಕು. ಕೇಂದ್ರ ಸರಕಾರ ಈ ವಿಚಾರದಲ್ಲಿ ಜಾಗೃತವಾಗಿ ಕೆಲಸ ಮಾಡಬೇಕಿದೆ. ಮುಖ್ಯಮಂತ್ರಿಗಳು ಈ ವಿಚಾರ ತಿಳಿದ ಕೂಡಲೇ ತಕ್ಷಣವೇ ರಾಜ್ಯ ಸರಕಾರದ ಪರವಾಗಿ ಸಚಿವ ಸಂತೋಷ್ **3ನೇ ಪುಟಕ್ಕೆ**



## ಜನಿವಾರ ಮುಟ್ಟಿದರೆ ಜಾಗೃತೆ –ಶಾಸಕ ರೈ

**ಪುತ್ತೂರು:** ಜನಿವಾರವನ್ನು ಮುಟ್ಟುವ ಹಕ್ಕು ಯಾರಿಗೂ ಇಲ್ಲ. ಯಾವುದೇ ಅಧಿಕಾರಿಯು ಜನಿವಾರ ತೆಗೆಯುವ ಪ್ರಯತ್ನಕ್ಕೆ ಕೈ ಹಾಕಿದಲ್ಲಿ ನಮ್ಮ ಸರ್ಕಾರ ಸುಮ್ಮನೆ ಇರುವುದಿಲ್ಲ. ಜನಿವಾರ ಮುಟ್ಟಿದರೆ ಜಾಗೃತೆ ಎಂದು ಪುತ್ತೂರು ಶಾಸಕ ಅಶೋಕ್ ಕುಮಾರ್ ರೈ ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ಸಿಇಟಿ ಪರೀಕ್ಷೆಯ ಸಂದರ್ಭ ಜನಿವಾರ ತೆಗೆಯಲು ಅಧಿಕಾರಿಗಳು ಸೂಚನೆ ನೀಡಿರುವ ಬಗ್ಗೆ ಹೇಳಿಕೆ ನೀಡಿರುವ ಶಾಸಕ ಅಶೋಕ್ ರೈ ಅವರು ಜನಿವಾರ ಧರಿಸುವುದು ಒಂದು ಸಂಸ್ಕಾರ, **3ನೇ ಪುಟಕ್ಕೆ**









## ಸುದ್ದಿ ತುಣುಕು

ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಖಂಡನೀಯ. ಉಗ್ರರ ಸದೆಬಡೆಯುವಲ್ಲಿ ಕೇಂದ್ರಕ್ಕೆ ಸಂಪೂರ್ಣ ಬೆಂಬಲ ಇದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ರಸ್ತೆ ನಿರ್ಮಾಣ ಮಾಡುವ ವಿಚಾರಕ್ಕೆ ಎರಡು ಗುಂಪುಗಳ ನಡುವೆ ನಡೆದ ಗಲಾಟೆಯಲ್ಲಿ, ಗಣಿ ಮಾಲೀಕ ಸಕಲೇಶ್ ರೈತ ರವಿ ಮೇಲೆ ಗುಂಡು ಹಾರಿಸಿದ, ಕೊಲೆ ಯತ್ನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಚೇನಹಳ್ಳಿ ಪೊಲೀಸರು ಆರೋಪಿ ಸಕಲೇಶ್ ಅವರನ್ನು ಬಂಧಿಸಿದ್ದಾರೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಪೈಶಾಚಿಕ ಭಯೋತ್ಪಾದಕ ದಾಳಿಯು ಕಣಿವೆ ರಾಜ್ಯದಲ್ಲಿ ಇನ್ನೂ ಅಡಗಿರುವ ಕ್ರೂರತ್ವದ ನೆರಳಿನ ಮತ್ತು ದ್ವೇಷದ ಹೇಯ ದುಃಸ್ವಪ್ನವಾಗಿದೆ ಎಂದು ಜೆಡಿಎಸ್‌ನ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಮ್ಮು-ಕಾಶ್ಮೀರದಲ್ಲಿ ನಡೆದ ಉಗ್ರರ ದಾಳಿ ಹಿನ್ನೆಲೆಯಲ್ಲಿ ನಮ್ಮೆಲ್ಲರ ಕಾರ್ಯಕ್ರಮ ಮುಂದೂಡಲು ಚಿಂತಿಸಿದ್ದು, ಕಾರ್ಯಕ್ರಮವನ್ನು ಮುಂದೂಡಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಏಪ್ರಿಲ್ 22ರಂದು ಕಾಶ್ಮೀರದ ಪಹಲ್ಗಾಮ್ ನಡೆದ ಉಗ್ರರ ದಾಳಿಯಲ್ಲಿ ಪ್ರಾಣತೆತ್ತ ಇಬ್ಬರು ಕನ್ನಡಿಗರ ಮೃತದೇಹಗಳನ್ನು ಬೆಂಗಳೂರಿಗೆ ತರಲಾಯಿತು. ಶಿವಮೊಗ್ಗದ ಮಂಜುನಾಥ್ ಹಾಗೂ ಬೆಂಗಳೂರಿನ ಭರತ್‌ಭೂಷಣ್ ಅವರ ಮೃತದೇಹಗಳು ತಲುಪಿದ್ದು, ಆಂಬುಲೆನ್ಸ್ ಮೂಲಕ ನಿವಾಸಗಳಿಗೆ ರವಾನಿಸಲಾಗಿದೆ.

ಸುಂಕ ಸಮರವನ್ನು ಒಂದು ದೇಶವಾಗಿ ಹೇಗೆ ಎದುರಿಸಬೇಕೆಂದು ಕೇಂದ್ರ ಸರಕಾರವು ಕೂಡ ಯೋಚಿಸುತ್ತಿದೆ. ಒಂದು ರಾಜ್ಯವಾಗಿ ಕರ್ನಾಟಕವು ಕೂಡ ಇದಕ್ಕೆ ಸಿದ್ಧವಾಗಬೇಕು ಎಂದು ಸಚಿವ ಎಂ ಬಿ ಪಾಟೀಲ್ ಪ್ರತಿಪಾದಿಸಿದ್ದಾರೆ.

ಬಂಧನದ ಕಾರಣಗಳನ್ನು ಪ್ರತಿ ಹಂತದಲ್ಲಿ ಮೇಲ್ಮನವಿ ನ್ಯಾಯಾಧಿಕರಣದಂತೆ ಸಾಂವಿಧಾನಿಕ ನ್ಯಾಯಾಲಯಗಳು ಪರಿಶೀಲಿಸಲು ಅವಕಾಶವಿಲ್ಲ ಎಂದು ನ್ಯಾಯಪೀಠ ಹೇಳಿದೆ.

ಪ್ರಸಿದ್ಧ ಯಾತ್ರಾ ಸ್ಥಳವಾದ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆಗೆ ಕ್ಷಣಗಣನೆ ಆರಂಭಗೊಂಡಿದ್ದು, ಇಡೀ ಕ್ಷೇತ್ರ ವಿದ್ಯುತ್ ದೀಪಾಲಂಕಾರದಿಂದ ಜಗಮಗಿಸುತ್ತಿದೆ.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ನಡೆಸಿದ ಪೈಶಾಚಿಕ ಕೃತ್ಯವನ್ನು ಆದಿಚುಂಚನಗಿರಿ ಮಹಾ ಸಂಸ್ಥಾನದ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ತೀವ್ರವಾಗಿ ಖಂಡಿಸಿದ್ದಾರೆ.

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಚರ್ಚೆಗಳು ಇನ್ನು ನಡೆದಿಲ್ಲ. ವರಿಷ್ಠರು ನೋಡಿಕೊಳ್ಳುತ್ತಾರೆ ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

## ಬಂಗುಡೆ ಗಸಿ



**ಬೇಕಾಗುವ ಸಾಮಗ್ರಿಗಳು :**
ಬಂಗುಡೆ ಮೀನು – 5
ದನಿಯಾ – 2 ಚಮಚ
ಜೀರಿಗೆ – 1 ಚಮಚ
ಮೆಂತೆ – 1/4 ಚಮಚ
ಓಮ – 1/4 ಚಮಚ
ಅರಿಶಿಣ – 1/2 ಚಮಚ
ಬ್ಯಾಡಗಿ ಮೆಣಸು – 10–15
ಕಾಳುಮೆಣಸು – 10–15
ತೆಂಗಿನ ಎಣ್ಣೆ – 3 ಚಮಚ
ತುರಿದ ತೆಂಗಿನಕಾಯಿ – 2 ಕಪ್
ಈರುಳ್ಳಿ – 1
ಬೆಳ್ಳುಳ್ಳಿ – 5–6 ಎಸಳುಗಳು
ಹುಣಸೆಹುಳಿ – ಒಂದು ಲಿಂಬೆ ಹಣ್ಣಿನಷ್ಟು
ಹಸಿಮೆಣಸಿನಕಾಯಿ – 1–2
ಸಣ್ಣಗೆ ಹಚ್ಚಿದ ಶುಂಠಿ – 1 ಚಮಚ
ಉಪ್ಪು – ರುಚಿಗೆ ತಕ್ಕಷ್ಟು

**ಮಾಡುವ ವಿಧಾನ :**
ಬಂಗುಡೆ ಮೀನನ್ನು ಶುಚಿಗೊಳಿಸಿ ಒಂದು ಮೀನನ್ನು ಎರಡರಿಂದ ಮೂರು ತುಂಡುಗಳನ್ನಾಗಿ ಮಾಡಿ. ಅದಕ್ಕೆ ಅರಿಶಿಣ, ಒಂದು ಚಮಚ ತೆಂಗಿನ ಎಣ್ಣೆ ಮತ್ತು ಉಪ್ಪು ಬೆರೆಸಿ ಪಕ್ಕಕ್ಕಿಡಬೇಕು. ಒಂದು ಬಾಣಲೆಗೆ ಎಣ್ಣೆ ಹಾಕಿ, ಬಿಸಿಯಾದ ನಂತರ ದನಿಯ, ಜೀರಿಗೆ, ಓಮ ಹಾಗೂ ಕರಿಮೆಣಸು ಹಾಕಿ ಫ್ರೈ ಮಾಡಿ. ಬಳಿಕ ಇದನ್ನು ಒಂದು ಪಾತ್ರೆಗೆ ಹಾಕಿ, ನಂತರ ಅದೇ ಪಾತ್ರೆಗೆ ಕೆಂಪು ಮೆಣಸು ಹಾಕಿ ಫ್ರೈ ಮಾಡಿ. ಈಗ ಹುರಿದ ಎಲ್ಲಾ ಸಾಮಗ್ರಿಗಳನ್ನು ಮಿಕ್ಸಿ ಜಾರಿಗೆ ಹಾಕಿ, ಹುಣಸೆಹುಳಿ, ಬೆಳ್ಳುಳ್ಳಿ ಹಾಗೂ ತೆಂಗಿನ ತುರಿಯೊಂದಿಗೆ ನುಣ್ಣಗೆ ರುಬ್ಬಿಕೊಳ್ಳಬೇಕು, ಈಗ ಒಂದು ಪಾತ್ರೆಗೆ ಸ್ವಲ್ಪ ತೆಂಗಿನ ಎಣ್ಣೆ ಹಾಕಿ, ಎಣ್ಣೆ ಬಿಸಿಯಾದ ನಂತರ ಸಣ್ಣಗೆ ಹಚ್ಚಿದ ಈರುಳ್ಳಿ ಹಾಕಬೇಕು, ನಂತರ ರುಬ್ಬಿದ ಮಸಾಲೆಯನ್ನು ಪಾತ್ರೆಗೆ ಹಾಕಿ, ಅಗತ್ಯಕ್ಕೆ ತಕ್ಕಷ್ಟು ನೀರು ಸೇರಿಸಿ. ಮಸಾಲೆ ಗಟ್ಟಿಯಾಗಿದ್ದರೆ ರುಚಿ ಹೆಚ್ಚು. ಮಸಾಲೆಗೆ ಸ್ವಲ್ಪ ಉಪ್ಪು ಹಾಗೂ ಶುಂಠಿ ಸೇರಿಸಿ ಕುದಿಸಿ. ಸಾರು ಕುದಿಯಲು ಪ್ರಾರಂಭಿಸಿದಾಗ ಕತ್ತರಿಸಿದ ಹಸಿಮೆಣಸನ್ನು ಹಾಕಿ 10 ನಿಮಿಷ ಕುದಿಸಿ. ಕುದಿಯುತ್ತಿರುವ ಮಸಾಲೆಗೆ ಮೀನಿನ ತುಂಡುಗಳನ್ನು ಸೇರಿಸಿ ಮಧ್ಯಮ ಉರಿಯಲ್ಲಿ 5 ನಿಮಿಷ ಕುದಿಸಿದರೆ ರುಚಿಕರವಾದ ಮಂಗಳೂರು ಶೈಲಿಯ ಬಂಗುಡೆ ಗಸಿ ಸವಿಯಲು ಸಿದ್ಧ.

## ಉಗ್ರ ದಾಳಿಗೆ ಜಾಗತಿಕ ನಾಯಕರಿಂದ ಖಂಡನೆ



ಮಾಸ್ಕೋ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಸೇರಿದಂತೆ ಹಲವು ವಿಶ್ವ ನಾಯಕರು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರ ದಾಳಿಯನ್ನು ಖಂಡಿಸಿದ್ದಾರೆ. ಭಯೋತ್ಪಾದನೆಯ ವಿರುದ್ಧ ಭಾರತಕ್ಕೆ ಅಗತ್ಯ ಬೆಂಬಲ ನೀಡುವುದಾಗಿ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ಫೋನ್ ಕರೆಯಲ್ಲಿ ಮಾತನಾಡಿರುವ ಟ್ರಂಪ್, ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ.

## ಭಾರತದ ಅತ್ಯಾಧುನಿಕ ಸೂಪರ್ ಸಾನಿಕ್ ಕ್ಷಿಪಣೆ ಫಿಲಿಪೈನ್ಸ್‌ಗೆ

ನವದೆಹಲಿ : ಭಾರತದ ಮಿಲಿಟರಿ ಸಾಮರ್ಥ್ಯ ಈಗ ತನ್ನದೇ ದೇಶದಲ್ಲಿ ಮಾತ್ರವಲ್ಲದೆ ಇತರ ದೇಶಗಳಲ್ಲಿಯೂ ಸಾಬೀತಾಗುತ್ತಿದೆ. ಭಾರತದ ಅತ್ಯಾಧುನಿಕ ಸೂಪರ್‌ಸಾನಿಕ್ ಕ್ಷಿಪಣಿ ಈಗ ಚೀನಾದ ನೆರೆಯ ದೇಶವನ್ನು ತಲುಪಿದೆ. ಭಾರತವು ಬ್ರಹ್ಮೋಸ್ ಸೂಪರ್‌ಸಾನಿಕ್ ಕ್ರೂಸ್ ಮಿಸೈಲ್ ಸಿಸ್ಟಮ್‌ನ ಎರಡನೇ ಬ್ಯಾಟರಿಯನ್ನು ಫಿಲಿಪೈನ್ಸ್‌ಗೆ ಕಳುಹಿಸಲಾಗಿದೆ. ಈ ಡೆಲಿವರಿ 2022ರಲ್ಲಿ ಸಹಿ ಹಾಕಲಾದ ರೂ. 2800 ಕೋಟಿ ಒಪ್ಪಂದದ ಭಾಗವಾಗಿದ್ದು, ಇದರಲ್ಲಿ ಒಟ್ಟು ಮೂರು ಬ್ಯಾಟರಿಗಳನ್ನು ಪೂರೈಸಲಾಗುವುದು.




## ಪಾಕಿಸ್ತಾನದಲ್ಲಿ ಒಂದೇ ವಾರದಲ್ಲಿ ಎರಡು ಭೂಕಂಪ



ಪಾಕಿಸ್ತಾನ : ಪಾಕಿಸ್ತಾನದಲ್ಲಿ ಒಂದೇ ವಾರದ ಅಂತರದಲ್ಲಿ ಎರಡನೇ ಬಾರಿಗೆ ಭೂಮಿ ಕಂಪಿಸಿದೆ. 5.9 ತೀವ್ರತೆಯಲ್ಲಿ ಭೂಕಂಪ ಸಂಭವಿಸಿದೆ. ಆದರೆ, ಇದುವರೆಗೆ ಯಾವುದೇ ಜೀವ ಮತ್ತು ಆಸ್ತಿಪಾಸ್ತಿ ನಷ್ಟ ವರದಿಯಾಗಿಲ್ಲ. ರಾಷ್ಟ್ರೀಯ ಭೂಕಂಪನ ಮಾನಿಟರಿಂಗ್ ಕೇಂದ್ರದ ಪ್ರಕಾರ, ಅಫ್ಘಾನಿಸ್ತಾನ-ತಜಿಕಿಸ್ತಾನ್ ಗಡಿ ಪ್ರದೇಶದ ಬಳಿ ಭೂಕಂಪನದ ಕೇಂದ್ರ ಬಿಂದು ದಾಖಲಾಗಿದೆ. 94 ಕಿಲೋಮೀಟರ್ ಆಳದಲ್ಲಿ ಅಲೆಗಳು ಎದ್ದಿವೆ. ಬೆಳಗ್ಗೆ 11:47ಕ್ಕೆ ಭೂಮಿ ಅಲುಗಾಡಿದೆ ಎಂದು ತಿಳಿಸಿದೆ.

## ಬಿಲಾವಲ್ ಭುಟ್ಟೋ ಜರ್ದಾರಿಯಿಂದ ಕಟು ಟೀಕೆ!

ಪಾಕಿಸ್ತಾನ: ವಿವಾದಾತ್ಮಕ ಕಾಲುವೆ ಯೋಜನೆಗೆ ಸಂಬಂಧಿಸಿದಂತೆ ಪಾಕಿಸ್ತಾನ ಸರ್ಕಾರವನ್ನು ತೀವ್ರವಾಗಿ ಟೀಕಿಸಿರುವ ಪಾಕಿಸ್ತಾನ ಪೀಪಲ್ಸ್ ಪಾರ್ಟಿ(ಪಿಪಿಪಿ) ಅಧ್ಯಕ್ಷ ಬಿಲಾವಲ್ ಭುಟ್ಟೋ ಜರ್ದಾರಿ, ಈ ಯೋಜನೆಯನ್ನು ರದ್ದುಗೊಳಿಸದಿದ್ದರೆ, ಆಡಳಿತ ಪಕ್ಷದ ಮೈತ್ರಿಯಿಂದ ಬೆಂಬಲ ಹಿಂಪಡೆಯುವುದಾಗಿ ಎಚ್ಚರಿಕೆ ನೀಡಿದ್ದಾರೆ ಎಂದು ವರದಿಯಾಗಿದೆ. ಪಾಕಿಸ್ತಾನ ಸರ್ಕಾರವು ಪ್ರಸ್ತಾವಿತ ಕಾಲುವೆ ಉಪಕ್ರಮಗಳನ್ನು ಹಿಂತೆಗೆದುಕೊಳ್ಳಬೇಕು ಇಲ್ಲವಾದಲ್ಲಿ ಆಡಳಿತ ಒಕ್ಕೂಟದಿಂದ ಪಿಪಿಪಿ ಬೆಂಬಲ ಕಳೆದುಕೊಳ್ಳುವ ಅಪಾಯ ಎದುರಿಸಬೇಕಾದೀತು ಎಂದು ಬಿಲಾವಲ್ ಭುಟ್ಟೋ ಜರ್ದಾರಿ ಹೇಳಿದ್ದಾರೆ.



## ಅಮೆರಿಕಾ ಪ್ರವಾಸದಲ್ಲಿ ರಾಹುಲ್ ಗಾಂಧಿ



ನ್ಯೂಯಾರ್ಕ್: ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಅಮೆರಿಕಾ ಪ್ರವಾಸಕ್ಕೆ ತೆರಳಿದ್ದಾರೆ. ಶನಿವಾರ ಅಮೆರಿಕಾ ತಲುಪಿರುವ ಕಾಂಗ್ರೆಸ್ ನಾಯಕ, ಅಲ್ಲಿನ ಅನಿವಾಸಿ ಭಾರತೀಯರು ಮತ್ತು ಉದ್ಯಮಿಗಳ ಜೊತೆ ಸಂವಾದ ನಡೆಸಲಿದ್ದಾರೆ. ಜೊತೆಗೆ ಸೋಮವಾರ ಮತ್ತು ಮಂಗಳವಾರ ಬ್ರೌನ್ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ ಭಾಷಣ ಮಾಡಲಿದ್ದಾರೆ. ರಾಹುಲ್ ಗಾಂಧಿಗೆ ಯುಎಸ್‌ಗೆ ಸ್ವಾಗತ! ಯುವಜನತೆ, ಪ್ರಜಾಪ್ರಭುತ್ವ ಮತ್ತು ಉತ್ತಮ ಭವಿಷ್ಯಕ್ಕಾಗಿ ಧ್ವನಿ. ಕೇಳೋಣ, ಕಲಿಯೋಣ ಮತ್ತು ಒಟ್ಟಿಗೆ ಕಟ್ಟೋಣ ಎಂದು ಭಾರತೀಯ ಸಾಗರೋತ್ತರ ಕಾಂಗ್ರೆಸ್‌ನ ಮುಖ್ಯಸ್ಥ ಸ್ಯಾಮ್ ಪಿತ್ರೋಡಾ ಅವರು ಎಕ್ಸ್ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ.

## ನಿರಾಶ್ರಿತರಿದ್ದ ಶಾಲೆ ಮೇಲೆ ಇಸ್ರೇಲ್ ದಾಳಿ

ದೀರ್ ಅಲ್ ಬಲಾಹ್: ಗಾಜಾ ಪಟ್ಟಣದಲ್ಲಿ ನಿರಾಶ್ರಿತರಿದ್ದ ಶಾಲೆಯ ಮೇಲೆ ಇಸ್ರೇಲ್ ರಾತ್ರೋರಾತ್ರಿ ನಡೆಸಿದ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ 23ಕ್ಕೆ ಏರಿಕೆಯಾಗಿದೆ ಎಂದು ಗಾಜಾದ ಆರೋಗ್ಯ ಅಧಿಕಾರಿಗಳು ಹೇಳಿದ್ದಾರೆ. ಇಸ್ರೇಲ್ ಹಾಗೂ ಗಾಜಾ ನಡುವಿನ ಯುದ್ಧವನ್ನು ಕೊನೆಗೊಳಿಸಲು 5ರಿಂದ 7 ವರ್ಷಗಳ ಅವಧಿಗೆ ಒಪ್ಪಂದ ಮಾಡಿಕೊಂಡು ಎಲ್ಲಾ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸುವ ಬಗ್ಗೆ ಅರಬ್‌ನ ಮಧ್ಯಸ್ಥಿಕೆದಾರರು ಮಾತುಕತೆ ನಡೆಸುತ್ತಿರುವ ಬೆನ್ನಲ್ಲೇ ಈ ದಾಳಿ ನಡೆದಿದೆ.



## ಬೆಂಗಳೂರು ಡ್ರೀಮ್ ತಂಡಕ್ಕೆ ಭರ್ಜರಿ ಜಯ



ಬೆಂಗಳೂರು: ಬೆಂಗಳೂರು ಡ್ರೀಮ್ ಯುನೈಟೆಡ್ ಎಫ್‌ಸಿ ಬಿಡಿಎಫ್‌ಎ ಎ ಡಿವಿಷನ್ ಲೀಗ್ ಪಂದ್ಯದಲ್ಲಿ ಬುಧವಾರ ಬೆಂಗಳೂರು ಸಿಟಿ ಎಫ್‌ಸಿ ವಿರುದ್ಧ 4–0 ಗೋಲುಗಳಿಂದ ಗೆಲುವು ಸಾಧಿಸಿತು. ಅಶೋಕನಗರದ ಬೆಂಗಳೂರು ಫುಟ್‌ಬಾಲ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಬೆಂಗಳೂರು ಡ್ರೀಮ್ ತಂಡದ ಪರ ಜೈ ಹರಿಬರ್ಮನ್ (11ನೇ ನಿ., 52ನೇ ನಿ., 70ನೇ ನಿ.) ಮತ್ತು ಕೆ. ಲಾಲ್‌ರಿನ್‌ಫೆಲಾ (20ನೇ ನಿ.) ಗೋಲು ಗಳಿಸಿದರು. ಡಿವೈಇಎಸ್ ಎಫ್‌ಸಿ ತಂಡ 10–0 ಗೋಲುಗಳಿಂದ ಯಂಗ್ ಚಾಲೆಂಜರ್ಸ್ ಎಫ್‌ಸಿ ವಿರುದ್ಧ ಭರ್ಜರಿ ಜಯಗಳಿಸಿತು.

## ಹಂಪಿಗೆ ಫಿಡೆ ಗ್ರ್ಯಾನ್‌ಪ್ರಿ ಕಿರೀಟ

ಪುಣೆ: ಭಾರತದ ಕೋನೇರು ಹಂಪಿ ಅವರು ಫಿಡೆ ಮಹಿಳಾ ಗ್ರ್ಯಾನ್‌ಪ್ರಿ ಚೆಸ್ (ಪುಣೆ ಲೆಗ್) ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದುಕೊಂಡರು. ಗ್ರ್ಯಾಂಡ್‌ಮಾಸ್ಟರ್‌ಗಳಾದ ಹಂಪಿ ಮತ್ತು ಚೀನಾದ ಝು ಜಿನೆರ್ ಅವರು ತಲಾ ಏಳು ಪಾಯಿಂಟ್ಸ್ ಗಳಿಸಿದರೂ, ಉತ್ತಮ ಟೈಬ್ರೇಕ್ ಸ್ಕೋರ್ ಆಧಾರದಲ್ಲಿ ಹಂಪಿ ಚಾಂಪಿಯನ್ ಆದರು. ಐದು ತಿಂಗಳ ಹಿಂದೆ ವಿಶ್ವ ಮಹಿಳಾ ರ್‍ಯಾಪಿಡ್ ಚಾಂಪಿಯನ್ ಪಟ್ಟಕ್ಕೇರಿದ್ದ ಹಂಪಿ ಒಂಬತ್ತನೇ ಹಾಗೂ ಅಂತಿಮ ಸುತ್ತಿನಲ್ಲಿ ಬಲ್ಗೇರಿಯಾದ ನುರ್ಗ್ಯುಲ್ ಸಲಿಮೋವಾ (3.5) ಅವರನ್ನು ಮಣಿಸಿ ಒಟ್ಟು ಏಳು ಪಾಯಿಂಟ್ಸ್ ಕಲೆಹಾಕಿದರು.




## ಬೀಗಲ್ಸ್, ವಿಮಾನಪುರ ತಂಡಗಳು ಚಾಂಪಿಯನ್



ಬೆಂಗಳೂರು: ಬೀಗಲ್ಸ್ ಬಾಲಕಿಯರ ತಂಡ ಮತ್ತು ವಿಮಾನಪುರ ಬಾಲಕರ ತಂಡ ಸಬ್ ಜೂನಿಯರ್ ಬ್ಯಾಸ್ಕೆಟ್‌ಬಾಲ್ ಚಾಂಪಿಯನ್‌ಷಿಪ್ ಮುಡಿಗೇರಿಸಿಕೊಂಡಿದೆ. ನಗರದ ಕಂಠೀರವ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ಆಶ್ರಯದಲ್ಲಿ ನಡೆದ ಬಾಲಕಿಯರ ಫೈನಲ್ ಪಂದ್ಯದಲ್ಲಿ ಬೀಗಲ್ಸ್ ತಂಡ ಫೈನಲ್‌ನಲ್ಲಿ 44 42 ಅಂಕಗಳಿಂದ ಮಂಡ್ಯ ಜಿಲ್ಲಾ ತಂಡದ ವಿರುದ್ಧ ರೋಚಕವಾಗಿ ಗೆದ್ದುಕೊಂಡಿತು.

## ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ದರ ಪರಿಷ್ಕರಣೆ




ಬೆಂಗಳೂರು: ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ದರ ಪರಿಷ್ಕರಣೆ ಮಾಡಲಾಗಿದ್ದು, 69 ಹೊಸ ಚಿಕಿತ್ಸೆಗಳನ್ನು ಸೇರಿಸಿ, ಒಟ್ಟು 2,191 ಚಿಕಿತ್ಸೆಗಳನ್ನು ಅಂತಿಮಗೊಳಿಸಿದಂತಾಗಿದೆ. ಸದಸ್ಯರಿಗೆ ನೀಡುತ್ತಿರುವ ಶಸ್ತ್ರಚಿಕಿತ್ಸೆಗಳ ದರ ಪರಿಷ್ಕರಣೆ ಕುರಿತು ಶಾಸಕ ಡಾ.ಶ್ರೀನಿವಾಸ ಎನ್.ಟಿ. ಅವರ ಅಧ್ಯಕ್ಷತೆಯಲ್ಲಿ ರಚಿಸಿರುವ ದರ ಪರಿಷ್ಕರಣೆ ಸಮಿತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಶಿಫಾರಸ್ಸುಗಳನ್ನು ಸಲ್ಲಿಸಿದೆ. ಪರಿಷ್ಕೃತ ಯಶಸ್ವಿನಿ ಯೋಜನೆಯನ್ನು ರಾಜ್ಯ ಸರ್ಕಾರವು 2022–23ರಿಂದ ಮರುಜಾರಿಗೊಳಿಸಿದೆ. ಪ್ರಸ್ತುತ ಯಶಸ್ವಿನಿ ಯೋಜನೆಯಲ್ಲಿನ ಚಿಕಿತ್ಸಾ ದರಗಳು 2017–18 ಅವಧಿಯಲ್ಲಿ ನಿಗದಿ ಮಾಡಿದ ದರಗಳಾಗಿದ್ದವು.

## ಆರ್ಥಿಕ, ಸಾಮಾಜಿಕ ಪ್ರಜಾಪ್ರಭುತ್ವ ಇನ್ನೂ ಸಿಕ್ಕಿಲ್ಲ : ಸಿಎಂ

ಬೆಳಗಾವಿ: "ನನ್ನ ಅವಧಿಯಲ್ಲಿ ಎಲ್ಲರನ್ನೂ ಸಮಾನವಾಗಿ ಕಾಣಲು, ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿ, ಎಲ್ಲರನ್ನೂ ಮುಖ್ಯ ವಾಹಿನಿಗೆ ತರಲು ಮತ್ತು ಸಂಪತ್ತನ್ನು ಹಂಚಿಕೆ ಮಾಡಲು ನಾನು ಪ್ರಯತ್ನ ಮಾಡುತ್ತಿದ್ದೇನೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಚಿಕ್ಕೋಡಿ ಪಟ್ಟಣದಲ್ಲಿ ಯಾದವ–ಗೊಲ್ಲರ ಸಮುದಾಯ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಸಿಎಂ, "1947ರಲ್ಲಿ ನಮಗೆ ಸ್ವಾತಂತ್ರ್ಯ ದೊರೆತಿದೆ. ನನ್ನ ಅವಧಿಯಲ್ಲಿ ಎಲ್ಲರನ್ನೂ ಮುಖ್ಯವಾಹಿನಿಗೆ ತರಲು, ಸಮಾನ ಅವಕಾಶ ಕಲ್ಪಿಸಲು ಪ್ರಯತ್ನ ಮಾಡುತ್ತಿರುವೆ" ಎಂದು ಹೇಳಿದರು.



## ಅಧಿಕಾರಿಗಳ ದುರ್ನಡತೆ ಸಹಿಸಲು ಅಸಾಧ್ಯ : ಸಂಸದ ಯದುವೀರ್

ಮೈಸೂರು: ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಬರೆಯಲು ಬಂದ ಕೆಲ ವಿದ್ಯಾರ್ಥಿಗಳ ತೆಗೆಸಿರುವ ಅಧಿಕಾರಿಗಳ ದುರ್ನಡತೆ ಸಹಿಸಲು ಅಸಾಧ್ಯ. ಇದು ಇಡೀ ಬ್ರಾಹ್ಮಣ ಸಮುದಾಯಕ್ಕೆ ಮಾತ್ರವಲ್ಲ, ಹಿಂದೂ ಸಮುದಾಯಕ್ಕೆ ಎಸಗಿರುವ ದ್ರೋಹ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಇದು ಸರ್ಕಾರದ ಕುಮ್ಮಕ್ಕಿನಿಂದಲೇ ನಡೆದಿರುವ ದುಷ್ಕೃತ್ಯ ಎಂದು ಆರೋಪಿಸಿದ್ದಾರೆ. ಈ ಘಟನೆಯ ಕುರಿತು ಮೈಸೂರು ಬಿಜೆಪಿ ಘಟಕದ ವತಿಯಿಂದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಲಾಗಿದೆ.




## ಪ್ರವಾಸಿಗರಿಗೆ ತಲಾ 150ರೂ. ಪ್ರವೇಶ ಶುಲ್ಕ : ಯು.ಟಿ. ಖಾದರ್ ಕಿಡಿ

ಬೆಂಗಳೂರು: ವಿಧಾನಸೌಧ ಪ್ರವೇಶಕ್ಕೆ ಸಾರ್ವಜನಿಕರಿಗೆ ಶುಲ್ಕ ನಿಗದಿ ಮಾಡಲು ಸರ್ಕಾರ ಈಗಾಗಲೇ ನಿರ್ಧರಿಸಿದೆ. ಅದರಂತೆ ಪ್ರವಾಸೋದ್ಯಮ ಇಲಾಖೆ ವಿಧಾನಸೌಧಕ್ಕೆ ಗೈಡೆಡ್ ಟೂರ್‌ಗೆ ಪ್ರತಿ ವ್ಯಕ್ತಿಗೆ ತಲಾ 150 ರೂ. ನಿಗದಿ ಪಡಿಸುವ ಪ್ರಸ್ತಾವನೆಯನ್ನು ಮುಖ್ಯ ಕಾರ್ಯದರ್ಶಿಗೆ ಸಲ್ಲಿಕೆ ಮಾಡಿದೆ. ಇಷ್ಟು ದುಬಾರಿ ಪ್ರವೇಶ ಶುಲ್ಕಕ್ಕೆ ಸ್ಪೀಕರ್ ಯು.ಟಿ. ಖಾದರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ವಿಧಾನಸೌಧ ಬೆಂಗಳೂರು ನಗರದ ಆಕರ್ಷಣೀಯ ಪ್ರವಾಸಿ ತಾಣ. ಕರ್ನಾಟಕ ರಾಜ್ಯದ ಸುಂದರ ವಿನ್ಯಾಸದ ಆಡಳಿತ ಸೌಧವನ್ನು ಕಣ್ತುಂಬಿಕೊಳ್ಳಲು ನಿತ್ಯ ಸಾವಿರಾರು ಜನರು ಆಗಮಿಸುತ್ತಾರೆ.



## ಕನ್ನಡ ಸಾಹಿತ್ಯ ಪರಿಷತ್ ಬೈಲಾ ತಿದ್ದುಪಡಿ



ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್‌ನ ಆಡಳಿತ, ಪ್ರತಿನಿತ್ಯದ ಕಾರ್ಯಚಟುವಟಿಕೆ, ಸಾಹಿತ್ಯ ಸಮ್ಮೇಳನ ಪರಿಣಾಮಕಾರಿಯಾಗಿ ನಡೆಯುವ ಉದ್ದೇಶದಿಂದ ಬೈಲಾದಲ್ಲಿ ತಿದ್ದುಪಡಿ ತರಲು ಪರಿಷತ್ತು ಉದ್ದೇಶಿಸಿದೆ. ಹೈಕೋರ್ಟ್ ನಿವೃತ್ತ ನ್ಯಾ.ಎ.ಎಸ್. ಪಾಚ್ಛಾಪುರೆ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯ ಶಿಫಾರಸ್ಸಿನ ಅನುಸಾರ ಈಗ ಬೈಲಾ ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದೆ. ಈ ಹಿಂದೆ 2022ರಲ್ಲಿ ಪರಿಷತ್ತಿನ ಬೈಲಾದಲ್ಲಿ ಆಮೂಲಾಗ್ರ ಬದಲಾವಣೆ ತರಲಾಗಿತ್ತು. 2023ರಲ್ಲಿ 2ನೇ ಬಾರಿ ತಿದ್ದುಪಡಿ ಮಾಡಲಾಗಿತ್ತು. ಪ್ರಸ್ತುತ ಪ್ರಸ್ತಾಪಿತ ತಿದ್ದುಪಡಿಯು 20 ನಿಯಮಗಳನ್ನು ಒಳಗೊಂಡಿದೆ.


## ರೋಹಿತ್ ವೇಮುಲಾ ಕಾಯ್ದೆಯ ಕರಡು: ರಾಹುಲ್ ಗಾಂಧಿಗೆ ಪತ್ರ

ಬೆಂಗಳೂರು: ರೋಹಿತ್ ವೇಮುಲಾ ಕಾಯ್ದೆಯ ಕರಡು ಸಿದ್ಧಪಡಿಸುವಂತೆ ಕಾನೂನು ಸಲಹೆಗಾರರಿಗೆ ಸೂಚನೆ ನೀಡಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಅವರು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿಗೆ ಪತ್ರ ಬರೆದು ತಿಳಿಸಿದ್ದಾರೆ. ದಲಿತರು, ಆದಿವಾಸಿಗಳು ಹಾಗೂ ಹಿಂದುಳಿದ ವರ್ಗದವರನ್ನು ಮುಖ್ಯವಾಹಿನಿ ತರಲು ನಾವೆಲ್ಲ ಕೈಜೋಡಿಸಬೇಕು ಎಂಬ ತಮ್ಮ ನಿಲುವಿಗೆ ನನ್ನ ಸಂಪೂರ್ಣ ಸಹಮತವಿದೆ. ಶಿಕ್ಷಣ ಸಂಸ್ಥೆಗಳಲ್ಲಿ ದಮನಿತ ವರ್ಗದವರು ಯಾವುದೇ ರೀತಿಯ ತಾರತಮ್ಯ ಎದುರಿಸಬಾರದು. ನಮ್ಮ ಸರ್ಕಾರ ಸಮ ಸಮಾಜ ಸೃಷ್ಟಿಸಲು ಬದ್ಧವಾಗಿದೆ ಎಂದು ಪತ್ರದಲ್ಲಿ ಸಿದ್ದರಾಮಯ್ಯ ಉಲ್ಲೇಖಿಸಿದ್ದಾರೆ.



## ದಿನಗೂಲಿ ಕಾರ್ಮಿಕರಿಗೆ ಪಿಂಚಣಿ ನೀಡಲು ಆದೇಶಿಸಿದ ಹೈ ಕೋರ್ಟ್

ಬೆಂಗಳೂರು: ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯಲ್ಲಿ ದಿನಗೂಲಿ ಕಾರ್ಮಿಕರಾಗಿ ಸುಮಾರು ಮೂರು ದಶಕ ಸೇವೆ ಸಲ್ಲಿಸಿದ 14 ಜನ ನೌಕರರಿಗೆ ಮೂರು ತಿಂಗಳಲ್ಲಿ ಪಿಂಚಣಿ ಸೌಲಭ್ಯ ನೀಡುವಂತೆ ಹೈಕೋರ್ಟ್ ತಾಕೀತು ಮಾಡಿದೆ. ಕಾಳಪ್ಪ ಸೇರಿದಂತೆ ಚಿಕ್ಕಮಗಳೂರು ಜಿಲ್ಲೆಯ ಹದಿನಾಲ್ಕು ನೌಕರರಿಗೆ ಪಿಂಚಣಿ ನೀಡುವಂತೆ ಕರ್ನಾಟಕ ಆಡಳಿತಾತ್ಮಕ ನ್ಯಾಯಾಧೀಕರಣ (ಕೆಎಟಿ) ಹೊರಡಿಸಿದ್ದ ಆದೇಶ ರದ್ದು ಕೋರಿ ರಾಜ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಆಯುಕ್ತರು ಸಲ್ಲಿಸಿದ್ದ ಅರ್ಜಿ ವಜಾಗೊಳಿಸಿದ ನ್ಯಾಮೂ. ಕೃಷ್ಣ ಎಸ್.ದೀಕ್ಷಿತ್ ಅವರಿದ್ದ ವಿಭಾಗೀಯಪೀಠ ಆದೇಶ ಮಾಡಿದೆ.



## ಉಷ್ಣ ವಿದ್ಯುತ್ ಸ್ಥಾವರಕ್ಕೆ ಮಮತಾ ಬ್ಯಾನರ್ಜಿಯಿಂದ ಶಂಕುಸ್ಥಾಪನೆ

ಪಶ್ಚಿಮ ಬಂಗಾಳ: ಇಲ್ಲಿನ ಮೇದಿನಿಪುರ ಜಿಲ್ಲೆಯ ಸಲ್ಬೋನಿಯಲ್ಲಿ 1,600 ಮೆಗಾ ವ್ಯಾಟ್ ಸಾಮರ್ಥ್ಯದ ಉಷ್ಣ ವಿದ್ಯುತ್ ಸ್ಥಾವರಕ್ಕೆ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಶಂಕುಸ್ಥಾಪನೆ ನೆರವೇರಿಸಿದರು. ಈ ಸ್ಥಾವರ ತಲಾ 800 ಮೆಗಾವ್ಯಾಟ್‌ನ ಎರಡು ಘಟಕಗಳನ್ನು ಹೊಂದಿದ್ದು, ಜೆಎಸ್‌ಡಬ್ಲ್ಯೂ ಎನರ್ಜಿ ನಿರ್ಮಾಣ ಮಾಡಿದೆ. ಕಂಪನಿಯು ಇದಕ್ಕಾಗಿ 1,600 ಕೋಟಿ ರೂ ಹೂಡಿಕೆ ಮಾಡಿದೆ. ಗ್ರೀನ್‌ಫೀಲ್ಡ್ ಸ್ಥಾವರ ಸ್ಥಾಪಿಸುವ ಮೂಲಕ ದೇಶದ ಪೂರ್ವ ಭಾಗದ ಇಂಧನ ವಲಯಕ್ಕೆ ಕಂಪನಿ ಇದೇ ಮೊದಲ ಬಾರಿ ಈ ಯೋಜನೆಯ ಮೂಲಕ ಪ್ರವೇಶಿಸಿದೆ.



## ಮಾರುಕಟ್ಟೆಯಲ್ಲಿವೆ ಒರಿಜಿನಲ್‌ನಂತೆ ಕಾಣುವ ನಕಲಿ ನೋಟುಗಳು!



ನವದೆಹಲಿ : ಗುರುತಿಸಲು ಸಾಧ್ಯವಾಗದಂತೆ ತಯಾರಿಸಲಾದ ನಕಲಿ ನೋಟುಗಳು ಅಪಾರ ಪ್ರಮಾಣದಲ್ಲಿ ಚಲಾವಣೆಗೆ ಬಂದಿವೆ. ಅವು ಅಸಲಿ ನೋಟಗಳಾ ಎಂದು ಗುರುತಿಸುವುದು ತುಂಬಾ ಕಷ್ಟ. ಇದು ಯಾರೋ ಹೇಳಿದ ಮಾತಲ್ಲ, ಬದಲಾಗಿ ಕೇಂದ್ರ ಗೃಹ ಸಚಿವಾಲಯವೇ ನೀಡಿರುವ ಎಚ್ಚರಿಕೆ. ಆ ಕುರಿತ ವಿವರ ಇಲ್ಲಿದೆ. ದಿನೇ ದಿನೇ ಅಭಿವೃದ್ಧಿಯಾಗುತ್ತಿರುವ ತಂತ್ರಜ್ಞಾನವನ್ನು ದುರುಪಯೋಗಪಡಿಸಿಕೊಳ್ಳುತ್ತಿರುವ ವಂಚಕರು, ಸರ್ಕಾರಕ್ಕೆ ಮತ್ತು ಜನರಿಗೆ ಸವಾಲೊಡ್ಡುತ್ತಿದ್ದಾರೆ. ಈಗಾಗಲೇ ದೊಡ್ಡ ಪ್ರಮಾಣದಲ್ಲಿ ನಕಲಿ ನೋಟುಗಳು ಮಾರುಕಟ್ಟೆ ಪ್ರವೇಶಿಸಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

## ಜಮ್ಮುವಿನ ರಾಂಬನ್‌ನಲ್ಲಿ ಮೇಘಸ್ಫೋಟ

ಜಮ್ಮು: ಜಮ್ಮು ಮತ್ತು ಕಾಶ್ಮೀರದ ರಾಂಬನ್ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಸುರಿದ ಭಾರಿ ಮಳೆಗೆ ಉಂಟಾದ ಪ್ರವಾಹದಲ್ಲಿ ಮೂವರು ಸಾವನ್ನಪ್ಪಿದ್ದಾರೆ. ಮೇಘಸ್ಫೋಟಕ್ಕೆ ಭೂಕುಸಿತ ಉಂಟಾಗಿದ್ದು, ಸಂಚಾರ ಅಸ್ತವ್ಯಸ್ತವಾಗಿದೆ. 100ಕ್ಕೂ ಹೆಚ್ಚು ಜನರನ್ನು ರಕ್ಷಿಸಲಾಗಿದೆ. ನಿರಂತರ ಮಳೆಯಿಂದಾಗಿ ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿಯ ಹಲವು ಸ್ಥಳಗಳಲ್ಲಿ ಭೂಕುಸಿತ ಮತ್ತು ಮಣ್ಣು ಕುಸಿತ ಸಂಭವಿಸಿದೆ. ರಾಂಬನ್‌ನ ಸೆರಿ ಬಾಗ್ನಾ ಗ್ರಾಮದಲ್ಲಿ ಮೇಘಸ್ಫೋಟಕ್ಕೆ ಸಹೋದರರಾದ ಅಕಿಬ್ ಅಹ್ಮದ್, ಮೊಹಮ್ಮದ್ ಸಾಕಿಬ್ ಸೇರಿದಂತೆ ಮೂವರು ಸಾವನ್ನಪ್ಪಿದ್ದು ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ ಎಂದು ತಿಳಿಸಿದ್ದಾರೆ.



## ದಕ್ಷಿಣ ಆಫ್ರಿಕಾದ ಬೋಟ್ಸ್‌ವಾನದಿಂದ 8 ಚೀತಾಗಳನ್ನು ಭಾರತಕ್ಕೆ!

ಮಧ್ಯಪ್ರದೇಶ: ದಕ್ಷಿಣ ಆಫ್ರಿಕಾದ ಬೋಟ್ಸ್‌ವಾನದಿಂದ ಮತ್ತೆ 8 ಚೀತಾಗಳನ್ನು ಭಾರತಕ್ಕೆ ತರಲು ನಿರ್ಧರಿಸಲಾಗಿದ್ದು, ಎರಡು ಹಂತಗಳಲ್ಲಿ ಈ ಚೀತಾಗಳು ಈ ಬರಲಿದ್ದು, ಮೇಯಲ್ಲಿ ನಾಲ್ಕು ಚಿರತೆ ಆಗಮಿಸಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಮತ್ತು ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಅವರ ಸಮ್ಮುಖದಲ್ಲಿ ಶುಕ್ರವಾರ ನಡೆದ ಚೀತಾ ಯೋಜನೆಯ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿದ್ದ ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದ (ಎನ್‌ಟಿಸಿಎ) ಅಧಿಕಾರಿಗಳು ಈ ಮಾಹಿತಿಯನ್ನು ನೀಡಿದ್ದಾರೆ.



## ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಜೈಪುರ ಭೇಟಿ ರದ್ದು

ರಾಜಸ್ಥಾನ: ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ತಮ್ಮ ಕುಟುಂಬದೊಂದಿಗೆ ನಾಲ್ಕು ದಿನಗಳ ಭಾರತ ಪ್ರವಾಸದಲ್ಲಿದ್ದಾರೆ. ಜೈಪುರದ ಸಿಟಿ ಪ್ಯಾಲೇಸ್‌ಗೆ ಭೇಟಿ ನೀಡಬೇಕಿತ್ತು. ಆದರೆ ಅವರ ಪ್ರವಾಸ ರದ್ದಾಗಿದೆ ಎಂದು ವರದಿ. ಪ್ರವಾಸ ರದ್ದುಗೊಳಿಸಲು ಅಧಿಕೃತವಾಗಿ ಯಾವುದೇ ಕಾರಣವನ್ನು ನೀಡಲಾಗಿಲ್ಲ, ಆದರೆ ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಲಾಗುತ್ತಿದೆ. ಆಗ್ರಾ ಪ್ರವಾಸದ ನಂತರ ವ್ಯಾನ್ಸ್ ನೇರವಾಗಿ ಜೈಪುರದ ರಾಮ್‌ಬಾಗ್ ಹೋಟೆಲ್‌ಗೆ ತಲುಪಿದ್ದರು. ಪ್ರವಾಸ ರದ್ದಾದ ಕಾರಣ ವ್ಯಾನ್ಸ್ ಅವರು ರಾಂಬಾಗ್ ಅರಮನೆಯಲ್ಲಿ ಭೋಜನ ಸವಿದರು.





ಕರಾವಳಿ ತರಂಗಿಣಿ
# ಕಲಾ ತರಂಗಿಣಿ



## ರಂಜನಿ ರಾಘವನ್ ನಿರ್ದೇಶನದ ಚಿತ್ರಕ್ಕೆ 'ನೆನಪಿರಲಿ' ಪ್ರೇಮ್

"ಗುರುಶಿಷ್ಯರು", "ಲ್ಯಾಂಡ್ ಲಾರ್ಡ್" ಚಿತ್ರಗಳ ನಿರ್ದೇಶಕ ಹಾಗೂ "ಕಾಟೇರ" ಚಿತ್ರದ ಲೇಖಕ ಜಡೇಶ್ ಕೆ. ಹಂಪಿ ಈಗ ನಿರ್ಮಾಪಕರಾಗಿದ್ದಾರೆ. ವಿಜಯನಗರ ಮೂಲದವರಾದ ಜಡೇಶ್ ತಮ್ಮ ನಿರ್ಮಾಣ ಸಂಸ್ಥೆಗೆ ಹಂಪಿ ಪಿಕ್ಚರ್ಸ್ ಎಂಬ ಹೆಸರಿಟ್ಟಿದ್ದಾರೆ. ನಿರ್ಮಾಣಕ್ಕೆ ರಾಮಕೃಷ್ಣ ಹಾಗೂ ಆನಂದ್ ಕುಮಾರ್ ನೇತೃತ್ವದ RK & AK ಎಂಟರ್ಟೈನ್ಮೆಂಟ್ ಸಂಸ್ಥೆ ಸಹ ನಿರ್ಮಾಣಕ್ಕೆ ಸಾಥ್ ನೀಡಿದೆ. ಕಲಾವಿದೆಯಾಗಿ ಜನಪ್ರಿಯರಾಗಿರುವ ರಂಜನಿ ರಾಘವನ್ ಮೊದಲ ಬಾರಿಗೆ ನಿರ್ದೇಶನ ಮಾಡುತ್ತಿರುವ ಈ ಚಿತ್ರಕ್ಕೆ "ಡಿಡಿ ಡಿಕ್ಕಿ" ಎಂದು ಶೀರ್ಷಿಕೆ ಇಡಲಾಗಿದ್ದು, "ನೆನಪಿರಲಿ" ಪ್ರೇಮ್ ನಾಯಕನಾಗಿ ನಟಿಸುತ್ತಿದ್ದಾರೆ. ಲೆಜೆಂಡ್ ಇಳಯರಾಜ ಅವರ ಸಂಗೀತ ನಿರ್ದೇಶನದ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ಗೋಲ್ಡನ್ ಗಣೇಶ್ ಪುತ್ರ ಮಾಸ್ಟರ್ ವಿಹಾನ್ ಕೂಡ ಅಭಿನಯಿಸುತ್ತಿದ್ದಾರೆ. ಇತ್ತೀಚೆಗೆ ಪ್ರೇಮ್ ಅವರ ಹುಟ್ಟುಹಬ್ಬದ ದಿನ ಈ ನೂತನ ಚಿತ್ರದ ಶೀರ್ಷಿಕೆ ಹಾಗೂ ಮೋಷನ್ ಪೋಸ್ಟರ್ ಅನಾವರಣ ಅದ್ದೂರಿಯಾಗಿ ನೆರವೇರಿತು. "ಗುರು ಶಿಷ್ಯರು" ಚಿತ್ರದಲ್ಲಿ ನಟಿಸಿದ್ದ ಬಾಲ ಪ್ರತಿಭೆಗಳು ಶೀರ್ಷಿಕೆ ಅನಾವರಣ ಮಾಡಿದರು. ಅದಕ್ಕೂ ಮುನ್ನ ನಾಡಗೀತೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಪ್ರೇಮ್ ಅವರಿಗೆ ಪತ್ನಿ ಹಾಗೂ ಪುತ್ರಿ ಆರತಿ ಬೆಳಗಿ ಸಿಹಿ ತಿನಿಸಿ ಹುಟ್ಟುಹಬ್ಬದ ಶುಭಾಶಯ ತಿಳಿಸಿದ್ದು ವಿಶೇಷವಾಗಿತ್ತು. ತಮ್ಮ ಚಿತ್ರದ ಬಿಡುಗಡೆಯ ದಿನವೇ ಅಜೇಯ್ ರಾವ್ ಕಾರ್ಯಕ್ರಮಕ್ಕೆ ಆಗಮಿಸಿ ಮಿತ್ರನಿಗೆ ಶುಭಾಶಯ ತಿಳಿಸಿದರು. ಗುರು ದೇಶಪಾಂಡೆ, ಆರ್. ಎಸ್.ಗೌಡ, ಜಗದೀಶ್‌ಗೌಡ, ರವಿಗೌಡ, ಕೃಷ್ಣಸಾರ್ಥಕ್, "ಲ್ಯಾಂಡ್ ಲಾರ್ಡ್" ಚಿತ್ರದ ನಿರ್ಮಾಪಕ ಸೂರಜ್ ಮುಂತಾದವರು ಪ್ರೇಮ್ ಅವರಿಗೆ ಹಾಗೂ ಚಿತ್ರತಂಡಕ್ಕೆ ಶುಭ ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ರಂಜನಿ ರಾಘವನ್ ಅವರು "ಕಾಟೇರ" ಚಿತ್ರದಲ್ಲೂ ನಮ್ಮ ಬರವಣಿಗೆ ತಂಡದಲ್ಲಿದ್ದರು. ಆನಂತರ ತಾವೇ ಒಂದು ಪುಸ್ತಕ ಬರೆದಿರುವುದಾಗಿ ಹೇಳಿ, ನನಗೆ ಪುಸ್ತಕ ನೀಡಿದರು. ಪುಸ್ತಕ ಓದಿ ಆಶ್ಚರ್ಯವಾಯಿತು. ಸಿನಿಮಾಗೆ ಹೇಳಿ ಮಾಡಿಸಿದ ಕಥೆ ಎನಿಸಿತು. ನಾನು ತರುಣ್ ಸುಧೀರ್ ಅವರ ಜೊತೆಗೆ ಚರ್ಚೆ ಮಾಡಿದೆ. ಆನಂತರ ಚಿತ್ರ ಆರಂಭವಾಯಿತು. ಚಂದದ ಕಥೆ ಬರೆದಿರುವ ರಂಜನಿ ಅವರೆ ನಿರ್ದೇಶನ ಮಾಡಲಿ ಎಂದು ನಿರ್ಧಾರವಾಯಿತು. ಪ್ರೇಮ್ ಈ ಕಥೆಗೆ ಸೂಕ್ತ ನಾಯಕ ಎಂದು ಎಲ್ಲರ ಅಭಿಪ್ರಾಯವಾಗಿತ್ತು. ಪ್ರೇಮ್ ಅವರು ಕಥೆ ಕೇಳಿ ಒಪ್ಪಿಕೊಂಡರು. ನಮ್ಮ ಹಂಪಿ ಪಿಕ್ಚರ್ಸ್‌ನ ಮೊದಲ ನಿರ್ಮಾಣಕ್ಕೆ ರಾಮಕೃಷ್ಣ ಹಾಗೂ ಆನಂದ್ ಕುಮಾರ್ ಜೊತೆಯಾದರು. ಪ್ರೇಮ್ ಅವರ ಹುಟ್ಟುಹಬ್ಬದ ಪ್ರಯುಕ್ತ ಮೋಷನ್ ಪೋಸ್ಟರ್ ಹಾಗೂ ಶೀರ್ಷಿಕೆ ಅನಾವರಣ ಮಾಡಲಾಗಿದೆ ಎಂದು ನಿರ್ಮಾಪಕ ಜಡೇಶ್ ಕೆ ಹಂಪಿ. ನಿರ್ಮಾಪಕ ರಾಮಕೃಷ್ಣ ಅವರು ಸಹ ಹಂಪಿ ಪಿಕ್ಚರ್ಸ್ ಜೊತೆಗೂಡಿ ಚಿತ್ರ ನಿರ್ಮಾಣ ಮಾಡುತ್ತಿರುವುದಕ್ಕೆ ಸಂತಸ ವ್ಯಕ್ತ ಪಡಿಸಿದರು.




## ಡಿ.ವಿ.ಜಿ ಅವರ ಬಾಲ್ಯ ಕಥನಾ ಸಿನಿಮಾ ರೂಪದಲ್ಲಿ ?

ಹೆಸರಾಂತ ಸಾಹಿತಿ ಡಾ॥ಡಿ.ವಿ.ಗುಂಡಪ್ಪ (ಡಿ.ವಿ.ಜಿ) ಅವರ ಜನಪ್ರಿಯ ಪದ್ಯ ಪುಸ್ತಕ "ಮಂಕುತಿಮ್ಮನ ಕಗ್ಗ". ಕನ್ನಡದಲ್ಲಿ ಈಗಾಗಲೇ ಕೆಲವು ಜನಪ್ರಿಯ ಚಿತ್ರಗಳನ್ನು ನಿರ್ದೇಶಿಸಿರುವ ರಾಜ ರವಿಶಂಕರ್ (ವಿ.ರವಿ), ಡಿ.ವಿ.ಜಿ ಅವರ "ಮಂಕುತಿಮ್ಮನ ಕಗ್ಗ"ವನ್ನು ಚಿತ್ರದ ಮೂಲಕ ತೆರೆಗೆ ತರುತ್ತಿದ್ದಾರೆ. ಎನ್ ಎ ಶಿವಕುಮಾರ್ ಅವರು ನಿರ್ಮಿಸಿರುವ ಹಾಗೂ ಮೀನಾ ಶಿವಕುಮಾರ್ ಸಹ ನಿರ್ಮಾಣವಿರುವ ಈ ಚಿತ್ರದ ಟ್ರೇಲರ್ ಇತ್ತೀಚೆಗೆ ಅದ್ದೂರಿಯಾಗಿ ಬಿಡುಗಡೆಯಾಯಿತು. ರಾಮೋಹಳ್ಳಿ ಶ್ರೀಗಳು ಸಾನಿಧ್ಯ ವಹಿಸಿದ್ದರು. ಸಾ.ರಾ.ಗೋವಿಂದು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ನರಸಿಂಹಲು, ಉಪಾಧ್ಯಕ್ಷ ಶಿಲ್ಪ ಶ್ರೀನಿವಾಸ್, ಕಾರ್ಯದರ್ಶಿ ಪ್ರವೀಣ್ ಕುಮಾರ್, ನಿರ್ದೇಶಕ ಸಾಯಿಪ್ರಕಾಶ್, ನಿರ್ದೇಶಕಿ, ನಟಿ ರೂಪ ಅಯ್ಯರ್, ನಟ ಸುಂದರರಾಜ್, ಸಂಗೀತ ನಿರ್ದೇಶಕ ವಿ.ಮನೋಹರ್, ಸಂಗಮೇಶ್ ಉಪಾಸೆ, ನಿರ್ಮಲ ಸಿ ಎಲಿಗಾರ್, ಮಾಜಿ ಶಾಸಕ ಲಕ್ಷ್ಮೀನಾರಾಯಣ್ ಸೇರಿದಂತೆ ಅನೇಕ ಗಣ್ಯರು ಡಿ.ವಿ.ಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಟ್ರೇಲರ್ ಅನಾವರಣ ಮಾಡಿದರು. ಆರಂಭದಲ್ಲಿ ಆದರ್ಶ್ ಅವರು "ಮಂಕುತಿಮ್ಮನ ಕಗ್ಗ"ದ ನಾಲ್ಕು ಪದ್ಯಗಳನ್ನು ಮನಮುಟ್ಟುವಂತೆ ಹಾಡಿದರು. ನಂತರ ಗಣ್ಯರು ಡಿ.ವಿ.ಜಿ ಅವರ ಬಾಲ್ಯವನ್ನು ಸಿನಿಮಾ ರೂಪಕ್ಕೆ ತಂದಿರುವ ನಿರ್ದೇಶಕ ಹಾಗೂ ನಿರ್ಮಾಪಕರ ಜೊತೆಗೆ ಚಿತ್ರತಂಡವನ್ನು ಮುಕ್ತಕಂಠದಿಂದ ಶ್ಲಾಘಿಸಿದರು. ಅದಕ್ಕೂ ಮುನ್ನ ಚಿತ್ರತಂಡದ ಸದಸ್ಯರು ಚಿತ್ರದ ಕುರಿತು ಮಾತನಾಡಿದರು. ಈ ಚಿತ್ರದಲ್ಲಿ ಡಿ.ವಿ.ಜಿ ಅವರ ಬಾಲ್ಯದ ದಿನಗಳ ಬಗ್ಗೆ ತೋರಿಸಲಾಗಿದೆ. ಬಾಲ್ಯದಲ್ಲಿ ಡಿ.ವಿ.ಜಿ ಅವರ ಮೇಲೆ ಅತ್ಯಂತ ಪ್ರಭಾವ ಬೀರಿದ್ದು ಅವರ ಸೋದರಮಾವ ತಿಮ್ಮಣ್ಣ ಮೇಷ್ಟು. ಸೋದರಮಾವ ಹಾಗೂ ಸೋದರಳಿಯನ ಬಾಂಧವ್ಯವನ್ನು ಈ ಚಿತ್ರದಲ್ಲಿ ತೋರಿಸಿದ್ದೇವೆ. ತಿಮ್ಮಣ್ಣ ಮೇಷ್ಟು ಪಾತ್ರದಲ್ಲಿ ಹಿರಿಯ ನಟ ರಾಮಕೃಷ್ಣ, ಸೋಮಿ (ಡಿ.ವಿ.ಜಿ) ಅವರ ಪಾತ್ರದಲ್ಲಿ ಮಾಸ್ಟರ್ ರಣವೀರ್, ಅಲಮೇಲು ಪಾತ್ರದಲ್ಲಿ ಭವ್ಯಶ್ರೀ ರೈ, ವೆಂಕರಮಣಯ್ಯ ಪಾತ್ರದಲ್ಲಿ ರವಿನಾರಾಯಣ್ ಹಾಗೂ ಅಜ್ಜಿಯ ಪಾತ್ರದಲ್ಲಿ ಲಕ್ಷ್ಮೀ ನಾಡಗೌಡ ಅಭಿನಯಿಸಿದ್ದಾರೆ. ಸಾಯಿಪ್ರಕಾಶ್, ನರಸೇಗೌಡ, ಶ್ರೀನಿವಾಸ್ ಕೆಮ್ತೂರ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಮೇ ಎರಡನೇ ವಾರದಲ್ಲಿ ಬಿಡುಗಡೆಯಾಗಲಿದೆ ಎಂದು ನಿರ್ದೇಶಕ ರಾಜ ರವಿಶಂಕರ್ ತಿಳಿಸಿದರು.



## 'ಸ್ಪಾರ್ಕ್' ಪೋಸ್ಟರ್ ವಿವಾದಕ್ಕೆ ತೆರೆ

ಸ್ಪಾರ್ಕ್ ಸಿನಿಮಾ ಪೋಸ್ಟರ್ ವಿವಾದಕ್ಕೆ ತೆರೆಬಿದ್ದಿದೆ. ನೆನಪಿರಲಿ ಪ್ರೇಮ್ ಹುಟ್ಟುಹಬ್ಬಕ್ಕೆ ಸ್ಪಾರ್ಕ್ ಚಿತ್ರ ತಂಡದಿಂದ ನಿನ್ನೆ ಪೋಸ್ಟರ್ ವೊಂದನ್ನು ಬಿಡುಗಡೆ ಮಾಡಲಾಗಿತ್ತು. ಈ ಚಿತ್ರದಲ್ಲಿ ನಿರಂಜನ್ ಸುಧೀಂದ್ರ ನಾಯಕನಾಗಿ ನಟಿಸುತ್ತಿದ್ದು, ಪ್ರೇಮ್ ವಿಶೇಷ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಈ ಪೋಸ್ಟರ್ ವಿರುದ್ಧ ನಟಿ, ನಿರ್ಮಾಪಕಿ ಶೃತಿ ನಾಯ್ಡು ಅವರು ಕಾನೂನು ಹೋರಾಟ ಮಾಡುವುದಾಗಿ ಹೇಳಿದ್ದರು. ಆ ವಿವಾದವೀಗ ತಣ್ಣಗಾಗಿದ್ದು, ಚಿತ್ರದ ನಿರ್ದೇಶಕರು ರಮೇಶ್ ಇಂದಿರಾ ಬಳಿ ಕ್ಷಮೆಯಾಚಿಸಿದ್ದಾರೆ. ಸ್ಪಾರ್ಕ್ ಸಿನಿಮಾಗೆ ಯುವ ನಿರ್ದೇಶಕ ಮಹಾಂತೇಶ್ ಹಂದ್ರಾಳ್ ಆಕ್ಷನ್ ಕಟ್ ಹೇಳಿದ್ದಾರೆ. ನಿರ್ದೇಶಕರಾಗಿ ಇದು ಇವರಿಗೆ ಮೊದಲ ಅನುಭವ. ಹೀಗಾಗಿ ಸಣ್ಣದೊಂದು ತಪ್ಪು ನಡೆದು ಹೋಗಿದೆ. ಆ ತಪ್ಪನ್ನು ಈಗ ತಿದ್ದಿಕೊಂಡಿದ್ದಾರೆ. "ರಮೇಶ್ ಇಂದಿರಾ ಅವರ ಬಳಿ ಕ್ಷಮೆ ಕೇಳಿದ್ದು, ನಿಮ್ಮಿಂದ ಪರ್ಮಿಷನ್ ತೆಗೆದುಕೊಂಡು ಮಾಡಬೇಕಿತ್ತು. ಮ್ಯಾನೇಜರ್ ಹೇಳಿದ್ದಾರೆಂದು ಫೋಟೋ ಬಳಸಲಾಗಿದೆ. ಆದರೆ ಅದು ಮಿಸ್ ಕಮ್ಯೂನಿಕೇಷನ್ ಆಗಿದೆ ಕ್ಷಮಿಸಿ" ಎಂದು ಕೇಳಿಕೊಂಡಿದ್ದಾರೆ. ಹೊಸ ನಿರ್ದೇಶಕರಿಗೆ ಒಳ್ಳೆದಾಗಲಿ. ತೊಂದರೆ ಇಲ್ಲ ಮಾಡಿ. ಮೊದಲು ನೀವು ಒಮ್ಮೆ ತಿಳಿಸಬೇಕಿತ್ತು. ಆದರೆ ಅದು ನಡೆದು ಹೋಗಿದೆ. ಮುಂದೆ ಈ ರೀತಿ ತಪ್ಪು ಆಗದಂತೆ ನೋಡಿಕೊಳ್ಳಿ ಎಂದು ರಮೇಶ್ ಇಂದಿರಾ ಹೇಳಿದ್ದಾರೆ. ಏನಿದು ವಿವಾದ? ಪ್ರೇಮ್ ಹುಟ್ಟುಹಬ್ಬಕ್ಕೆ ಬಿಡುಗಡೆಯಾದ ಪೋಸ್ಟರ್‌ನಲ್ಲಿ, ಒಬ್ಬ ರಾಜಕಾರಣಿಯು ಚಿತ್ರವನ್ನು ಹಿಡಿದುಕೊಂಡು ಅದಕ್ಕೆ ಸಿಗಾರಿನಿಂದ ಬೆಂಕಿ ನೀಡುವ ಚಿತ್ರವಿತ್ತು. ಆ ರಾಜಕಾರಣಿಯು ಖ್ಯಾತ ಕಲಾವಿದ ಕಂ ನಿರ್ದೇಶಕ ರಮೇಶ್ ಇಂದಿರಾ ಅವರದ್ದು. ಪೋಸ್ಟರ್ ರಮೇಶ್ ಇಂದಿರಾ ಅವರ ಚಿತ್ರ 'ಭೀಮಾ' ಸಿನಿಮಾದ್ದಾಗಿತ್ತು.



## ಪ್ರೀತಿ, ಪ್ರೇಮಕ್ಕೆ ವ್ಯಾಖ್ಯಾನ ನೀಡುವ ಸಿನಿಮಾ

ಉದಯ ವಾಹಿನಿಯಲ್ಲಿ ಎರಡು ದಶಕಕ್ಕೂ ಹೆಚ್ಚು ಕಾಲ 'ಹಾಸ್ಯ ಲಾಸ್ಯ' ಕಾಮಿಡಿ ಧಾರವಾಹಿಗಳನ್ನು ನೀಡಿ ವೀಕ್ಷಕರನ್ನು ರಂಜಿಸಿದ್ದ ಹೆಸರಾಂತ ಜೋಡಿಗಳಾದ ಡಾ.ಮುತ್ತುರಾಜ್.ಎಂ.ಎಸ್ ಮತ್ತು ಶ್ರೀಕಂಠ.ಬಿ.ಎ ಪ್ರೀತಿ ಪ್ರೇಮ ಪಂಗನಾಮ ಚಿತ್ರ ಮಾಡುವುದರೊಂದಿಗೆ ಬಹುಕಾಲದ ಕನಸನ್ನು ನನಸು ಮಾಡಿಕೊಂಡಿದ್ದಾರೆ. ಸಿನಿಮಾವು ತೆರೆಗೆ ಬರಲು ಸನ್ನಿಹಿತವಾಗಿರುವುದರಿಂದ ಪ್ರಚಾರದ ಮೊದಲ ಹಂತವಾಗಿ ಟೀಸರ್ ಹಾಗೂ ಹಾಡುಗಳ ಬಿಡುಗಡೆ ಕಾರ್ಯಕ್ರಮ ಎಸ್‌ಆರ್‌ವಿ ಚಿತ್ರಮಂದಿರದಲ್ಲಿ ಅದ್ದೂರಿಯಾಗಿ ನಡೆಯಿತು. ರಿಯಲ್‌ದಲ್ಲಿ ಕ್ಷೌರಿಕ. ರೀಲ್‌ದಲ್ಲಿ ಅದೇ ಪಾತ್ರ ನಿರ್ವಹಿಸಿರುವ ಡಾ. ಮುತ್ತುರಾಜ್ ಎಂ. ಎಸ್ ಮಾತನಾಡಿ ವಿಶ್ವಖ್ಯಾತಿ ನೆಲ್ಸನ್ ಮಂಡೇಲ ಹುಟ್ಟುಹಬ್ಬದ ದಿನದಂದು ನೂರಾರು ಜನರಿಗೆ ಉಚಿತ ಹೇರ್ ಕಟಿಂಗ್ ಮಾಡುವ ಮೂಲಕ ಸಮಾಜ ಸೇವೆ ಆರಂಭಿಸಿ ನಿರಂತರವಾಗಿ ಅದನ್ನು ಮುಂದುವರೆಸಿಕೊಂಡು ಹೋಗುತ್ತಿದ್ದೇನೆ. ಡಾ.ರಾಜ್, ಡಾ.ವಿಷ್ಣುವರ್ಧನ್, ದೇವೆಗೌಡರು ನಮ್ಮ ಧಾರವಾಹಿಗಳನ್ನು ತಪ್ಪದೆ ನೋಡುತ್ತಿದ್ದರು. ಮೂರು ದಶಕದ ಗೆಳೆಯ ಶ್ರೀಕಂಠ ಡೈರಕ್ಷನ್ ಮಾಡಲು ಆಸೆ ಪಟ್ಟದ್ದರು. ಅದರಂತೆ ನಾನು ಬಂಡವಾಳ ಹೂಡಿದ್ದೇನೆ ಎಂದರು. ಕಥೆ, ಚಿತ್ರಕತೆ ಬರೆದು ನಿರ್ದೇಶನ ಮಾಡಿರುವ ಶ್ರೀಕಂಠ.ಬಿ.ಎ ಹೇಳುವಂತೆ ಗತಕಾಲದಲ್ಲಿ ಪ್ರೀತಿ ಪ್ರೇಮಕ್ಕೆ ಬೆಲೆ ಇತ್ತು. ಆದರೆ ಇಂದು ಆರು, ಮೂರು, ಎರಡು, ಒಂದು ತಿಂಗಳು. ಕೊನೆಗೆ ಮೂರೇ ದಿವಸಕ್ಕೆ ದುಡ್ಡು ಇಲ್ಲವೆ ಕೊಲೆಯಲ್ಲಿ ಅಂತ್ಯ ಕಾಣುತ್ತದೆ. ಜಗತ್ತಿನಲ್ಲಿ ಜಾತಿಗಿಂತ ದೊಡ್ಡದು ಪ್ರೀತಿ. ಯಾರಾದರೇನು? ಗಂಡು-ಹೆಣ್ಣು ಎರಡೇ ಜಾತಿ ಇರುವುದು. ಬಟ್ಟೆ ಇಸ್ತ್ರೀ ಮಾಡುವ ರೋಲ್‌ಗೆ ಬಣ್ಣ ಹಚ್ಚಿದ್ದೇನೆ. ನಾವುಗಳು ಬಡತನದಿಂದ ಬಂದಿದ್ದರೂ, ನಮ್ಮ ಮಕ್ಕಳು ಹಾಗಾಗಬಾರದು. ಅವರನ್ನು ಶ್ರೀಮಂತರನ್ನಾಗಿ ಮಾಡಲು ಹೋದಾಗ ಹೇಗೆ ಪಂಗನಾಮವಾಯಿತು ಅನ್ನುವುದನ್ನು ಹಾಸ್ಯದೊಂದಿಗೆ ಜತೆಗೆ ಒಂದಷ್ಟು ಉತ್ತಮ ಸಂದೇಶಗಳನ್ನು ಸಮಾಜಕ್ಕೆ ಹೇಳುವ ಪ್ರಯತ್ನ ಮಾಡಲಾಗಿದೆ.



## ಏಪ್ರಿಲ್ 25ರಂದು ಗ್ಯಾಂಗ್‌ಸ್ಟರ್ ಅಲ್ಲ ಫ್ರಾಂಕ್ ಸ್ಟರ್

ವುಡ್ ಕ್ರೀಪರ್ಸ್ ಲಾಂಛನದಲ್ಲಿ ನಿರ್ಮಾಣವಾಗಿರುವ 'ಗ್ಯಾಂಗ್ ಸ್ಟರ್ ಅಲ್ಲ ಫ್ರಾಂಕ್ ಸ್ಟರ್' ಚಿತ್ರ ಬಿಡುಗಡೆ ಸಿದ್ಧವಾಗಿದ್ದು, ಇದೇ ಏಪ್ರಿಲ್ 25ರಂದು ರಾಜ್ಯಾದ್ಯಂತ ತೆರೆಗೆ ಬರುತ್ತಿದೆ. ಈ ಮೊದಲು 'ಭಾವಚಿತ್ರ' ಎಂಬ ಚಿತ್ರ ನಿರ್ದೇಶಿಸಿದ್ದ ಗಿರೀಶ್ ಕುಮಾರ್ ಮೂರನೇ ಪ್ರಯತ್ನವಾಗಿ 'ಗ್ಯಾಂಗ್ ಸ್ಟರ್ ಫ್ರಾಂಕ್ ಸ್ಟರ್' ಸಿನಿಮಾಗೆ ಆಕ್ಷನ್-ಕಟ್ ಹೇಳುವ ಜೊತೆಗೆ ನಾಯಕನಾಗಿಯೂ ನಟನೆ ಮಾಡಿದ್ದಾರೆ. ಮತ್ತೊಂದು ಮುಖ್ಯ ಪಾತ್ರದಲ್ಲಿ ಉಗ್ರಂ ಖ್ಯಾತಿಯ ತಿಲಕ್ ಶೇಖರ್ ಅಭಿನಯಿಸಿದ್ದಾರೆ. ಇತ್ತೀಚೆಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿರ್ದೇಶಕ ಕಮ್ ನಟ ಗಿರೀಶ್ ಕುಮಾರ್ 'ನಮ್ಮ ಚಿತ್ರವನ್ನು ನೋಡಿದ ಪ್ರಾದೇಶಿಕ ಸೆನ್ಸಾರ್ ಮಂಡಳಿ ಯಾವುದೇ ಕಟ್ಸ್ ಇಲ್ಲದೆ ಯು/ಎ ಪ್ರಮಾಣ ಪತ್ರ ನೀಡಿದೆ. ಇದೊಂದು ಯೂಟ್ಯೂಬರ್ ಕಥೆಯಾಗಿದ್ದು, ಫ್ರಾಂಕ್ ವಿಡಿಯೋ ಮಾಡಿಕೊಂಡು ಇರುವವನ ಸಿನಿಮಾ. ಜೊತೆಗೆ ಇದೊಂದು ಆಕ್ಷನ್, ಕಾಮಿಡಿ ಚಿತ್ರ. ಇದರಲ್ಲಿ ನಾನು ಫ್ರಾಂಕ್‌ಸ್ಟಾರ್ ಆಗಿದ್ರೆ ತಿಲಕ್ ಗ್ಯಾಂಗ್ ಸ್ಟರ್ ಆಗಿರುತ್ತಾರೆ. ಈ ಚಿತ್ರ ಜೀವನದಲ್ಲಿ ಸಾಧನೆ ಮಾಡಬೇಕು ಎಂಬುವವರಿಗೆ ಸ್ಪೂರ್ತಿ ಆಗಿರುತ್ತದೆ. ಅಲ್ಲದೆ ಎ ಲ್ಲರ ಲೈಫ್‌ಗೂ ಕನೆಕ್ಟ್ ಆಗುತ್ತದೆ' ಎಂದರು.



## ಮನಮುಟ್ಟುವ ಕಥೆ ಹೇಳಿದ ನಿರ್ದೇಶಕ ಮನು ಅನುರಾಮ್

ಗೋಧಿ ಬಣ್ಣ ಸಾಧಾರಣ ಮೈಕಟ್ಟು, ಸಪ್ತ ಸಾಗರದಾಚೆ ಎಲ್ಲೋ ಸರಣಿ ಸಿನಿಮಾಗಳ ನಿರ್ದೇಶಕ ಹೇಮಂತ್‌ಎಂ.ರಾವ್ ನಿರ್ಮಾಣದ ಚೊಚ್ಚಲ ಸಿನಿಮಾ ಅಜ್ಞಾತವಾಸಿ ಪ್ರೇಕ್ಷಕರ ಮೆಚ್ಚುಗೆ ಪಡೆದುಕೊಂಡಿದೆ. ಈ ಚಿತ್ರದ ಯಶಸ್ಸಿನ ಖುಷಿಯಲ್ಲಿರುವ ಅವರು ಇದೀಗ ಸುರುಳಿ ಎಂಬ ಕಿರುಚಿತ್ರವನ್ನು ನಿರ್ಮಿಸಿದ್ದಾರೆ. ತಮ್ಮದೇ ದಾಕ್ಷಾಯಿಣಿ ಟಾಕೀಸ್ ನಡಿ ನಿರ್ಮಾಣಗೊಂಡಿರುವ ಈ ಕಿರುಚಿತ್ರ ಮನಮುಟ್ಟುವ ಕಥೆಯನ್ನೊಳಗೊಂಡಿದೆ. ದಾಕ್ಷಾಯಿಣಿ ಟಾಕೀಸ್ ಯೂಟ್ಯೂಬ್‌ನಲ್ಲಿ ರಿಲೀಸ್ ಆಗಿರುವ 33 ನಿಮಿಷದ ಕಿರುಚಿತ್ರ ಮಾನವೀಯತೆಯನ್ನು ತೆರೆದಿಟ್ಟಿದೆ. ಯುವ ಸಿನಿಮೋತ್ಸಾಹಿಗಳ ಕನಸಿಗೆ ಹೇಮಂತ್ ರಾವ್ ಬೆಂಬಲವಾಗಿ ಕೆಲಸ ಮಾಡುತ್ತಿದ್ದಾರೆ. ತಮ್ಮ ತಾಯಿ ಹೆಸರಿನಡಿ ನಿರ್ಮಿಸಿರುವ ದಾಕ್ಷಾಯಿಣಿ ಟಾಕೀಸ್ ಪ್ರೊಡಕ್ಷನ್‌ನಡಿ ವಿಭಿನ್ನ ಬಗೆಯ ಸಿನಿಮಾ ಹಾಗೂ ಕಿರುಚಿತ್ರಗಳನ್ನು ನಿರ್ಮಿಸುವ ಹಾದಿಯಲ್ಲಿದ್ದು, ಅದರ ಭಾಗವಾಗಿ ರೂಪಗೊಂಡಿರುವ ಪ್ರಯತ್ನವೇ ಸುರುಳಿ ಕಿರುಚಿತ್ರ. ಇತ್ತೀಚೆಗೆ ಈ ಪ್ರೊಡಕ್ಷನ್ ನಡಿ ನಿರ್ಮಾಣಗೊಂಡ ಮೊದಲ ಚಿತ್ರ ಅಜ್ಞಾತವಾಸಿ ಪ್ರೇಕ್ಷಕರು ಹಾಗೂ ವಿಮರ್ಶಕರ ವಲಯದಿಂದ ಒಂದೊಳ್ಳೆ ಪ್ರತಿಕ್ರಿಯೆಯನ್ನು ಪಡೆದುಕೊಳ್ಳುತ್ತಿದೆ. ಈಗ ಸುರುಳಿ ಕಿರು ಚಿತ್ರವನ್ನು ನಿರ್ಮಿಸಿ, ಬಿಡುಗಡೆ ಮಾಡಿದ್ದಾರೆ.



## 'ದೂರ ತೀರ ಯಾನ'ದ ಮೊದಲ ಪ್ರೇಮಗೀತೆಗೆ ಮೆಚ್ಚುಗೆ

ವಿಜಯ್‌ಕೃಷ್ಣ ಹಾಗೂ ಪ್ರಿಯಾಂಕ ಕುಮಾರ್ ಮುಖ್ಯಪಾತ್ರದಲ್ಲಿ ನಟಿಸಿರುವ, ಡಿ ಕ್ರಿಯೇಶನ್ಸ್ ನಿರ್ಮಾಣ ಸಂಸ್ಥೆಯ ಅಡಿಯಲ್ಲಿ, ಆರ್. ದೇವರಾಜ್ ನಿರ್ಮಿಸುತ್ತಿರುವ 'ದೂರ ತೀರ ಯಾನ' ಸಿನೆಮಾದ ಮೊದಲ ಪ್ರೇಮಗೀತೆ ಎಂಆರ್‌ಟಿ ಮ್ಯೂಸಿಕ್ ಚಾನೆಲ್‌ನಲ್ಲಿ ಬಿಡುಗಡೆಯಾಗಿದ್ದು ಉತ್ತಮ ಪ್ರಶಂಸೆ ಪಡೆಯುತ್ತಿದೆ. ಕವಿರಾಜ್ ಅವರು ಬರೆದಿರುವ ಸಾಹಿತ್ಯಕ್ಕೆ, ಬಕ್ಕೇಶ್-ಕಾರ್ತಿಕ್ ಸ್ವರ ಸಂಯೋಜನೆ ಮಾಡಿದ್ದು, ಖ್ಯಾತ ಗಾಯಕರಾದ ಅರ್ಮಾನ್ ಮಲಿಕ್ ಹಾಡಿದ್ದಾರೆ. ಮಂಸೋರೆ ಬರೆದಿರುವ ಕಥೆಗೆ ಚೇತನಾ ತೀರ್ಥಹಳ್ಳಿ ಸಂಭಾಷಣೆ ಬರೆದಿದ್ದಾರೆ. ಈ ಸಿನೆಮಾದಲ್ಲಿ ಒಟ್ಟು ಆರು ಹಾಡುಗಳಿದ್ದು, ಬಕ್ಕೇಶ್ ಹಾಗೂ ಕಾರ್ತೀಕ್ ಹಾಡುಗಳನ್ನು ಸಂಯೋಜಿಸಿದ್ದಾರೆ.



## ಈ ವಾರ ತೆರೆಗೆ 'ಅಮರ ಪ್ರೇಮಿ ಅರುಣ್'

ಒಲವು ಸಿನಿಮಾ ಲಾಂಛನದಲ್ಲಿ ಒಲವಿನ ಗೆಳೆಯರು ಒಂದಿಷ್ಟು ಜನ ಸೇರಿ ಒಲವಿನಿಂದ ನಿರ್ಮಾಣ ಮಾಡಿರುವ ಹಾಗೂ ಪ್ರವೀಣ್ ಕುಮಾರ್‌ಜಿ ಬರವಣಿಗೆ ಹಾಗೂ ನಿರ್ದೇಶನದ 'ಅಮರ ಪ್ರೇಮಿ ಅರುಣ್' ಚಿತ್ರ ಈ ವಾರ (ಏಪ್ರಿಲ್ 25) ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಬಳ್ಳಾರಿ ಭಾಗದ ಪ್ರೇಮ ಕಥಾಹಂದರ ಹೊಂದಿರುವ ಈ ಚಿತ್ರದ ನಾಯಕನಾಗಿ ಹರಿಶರ್ವ ಅಭಿನಯಿಸಿದ್ದಾರೆ. ನಾಯಕಿಯಾಗಿ ದೀಪಿಕಾ ಆರಾಧ್ಯ ಇದ್ದಾರೆ. ಧರ್ಮಣ್ಣ ಕಡೂರು, ಕ್ರಿತಿ ಭಟ್, ಮಹೇಶ್ ಬಂಗ್, ಅರ್ಚನಾ ಕೊಟ್ಟಿಗೆ, ರಂಜಿತಾ ಪುಟ್ಟಸ್ವಾಮಿ, ಮಂಜಮ್ಮ ಜೋಗತಿ, ರಾಧ ರಾಮಚಂದ್ರ, ಬಲ ರಾಜವಾಡಿ ಹೀಗೆ ಅನುಭವಿ ಕಲಾವಿದರ ದೊಡ್ಡ ದಂಡೆ ಈ ಚಿತ್ರದಲ್ಲಿದೆ. ಬಳ್ಳಾರಿ ಆಸುಪಾಸಿನಲ್ಲೇ ಚಿತ್ರೀಕರಣ ನಡೆದಿರುವ ಈ ಚಿತ್ರದ ಸಂಭಾಷಣೆ ಕೂಡ ಅಲ್ಲಿನ ಸೊಗಡಿನಲ್ಲೇ ಇರುತ್ತದೆ. ಯೋಗರಾಜ್ ಭಟ್, ಜಯಂತ ಕಾಯ್ಕಿಣಿ ಹಾಗೂ ಪ್ರವೀಣ್ ಕುಮಾರ್ ಅವರು ಈ ಚಿತ್ರದ ಹಾಡುಗಳನ್ನು ಬರೆದಿದ್ದು, ಕಿರಣ್ ರವೀಂದ್ರನಾಥ್ ಸಂಗೀತ ನೀಡಿದ್ದಾರೆ.



## ಅಮೇಜಾನ್ ಪ್ರೈಮ್‌ನಲ್ಲಿ ರಕ್ಷಿತ್ ಶೆಟ್ಟಿ ನಿರ್ಮಾಣದ 'ಮಿಥ್ಯ'

ನಟ ರಕ್ಷಿತ್ ಶೆಟ್ಟಿ ಪರಂವಃ ಪಿಕ್ಚರ್ಸ್ ಮೂಲಕ ಅನೇಕ ಸದಭಿರುಚಿಯ ಚಿತ್ರಗಳನ್ನು ನಿರ್ಮಾಣ ಮಾಡುತ್ತಾ, ಹೊಸ ಪ್ರತಿಭೆಗಳನ್ನು ಪ್ರೋತ್ಸಾಹಿಸುತ್ತಾ ಬಂದಿದ್ದಾರೆ. ಇತ್ತೀಚೆಗಷ್ಟೇ ರಕ್ಷಿತ್ ಶೆಟ್ಟಿ ನಿರ್ಮಾಣದ "ಮಿಥ್ಯ" ಎಂಬ ಚಿತ್ರ ತೆರೆ ಕಂಡಿತ್ತು. ಹೆತ್ತವರನ್ನು ಕಳೆದುಕೊಂಡ ಮಿಥುನ್ ಎಂಬ ಹುಡುಗನ ಹೊಸ ಕನಸ್ಸಿನ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ನೋಡುಗರು ಫಿದಾ ಆಗಿದ್ದರು. ವಿಮರ್ಶಕರ ಪ್ರಶಂಸೆಗೂ ಪಾತ್ರವಾಗಿದ್ದ "ಮಿಥ್ಯ" ಚಿತ್ರ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲೂ ಮೆಚ್ಚುಗೆ ಗಳಿಸಿದೆ. ಈಗ ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರ ಅಮೇಜಾನ್ ಪ್ರೈಮ್‌ನಲ್ಲಿ ನೋಡಲು ಲಭ್ಯವಿದೆ.



## ಕಮಲ್ ಹಾಸನ್-ಮಣಿರತ್ನಂ 'ಥಗ್ ಲೈಫ್' ಮೊದಲ ಹಾಡು

ಮೂರು ದಶಕದ ನಂತರ ಕಮಲ್ ಹಾಸನ್ - ಮಣಿರತ್ನಂ ಕಾಂಬಿನೇಷನ್‌ನಲ್ಲಿ ಮೂಡಿಬರ್ತಿರುವ ಬಹುನಿರೀಕ್ಷಿತ ಸಿನಿಮಾ ಥಗ್ ಲೈಫ್. ಈ ಚಿತ್ರದ ಮೊದಲ ಹಾಡು ಬಿಡುಗಡೆ ಕಾರ್ಯಕ್ರಮ ನಿನ್ನೆ ಚೆನ್ನೈನಲ್ಲಿ ನಡೆಯಿತು. ಈ ಕಾರ್ಯಕ್ರಮದಲ್ಲಿ ಕಮಲ್ ಹಾಸನ್, ಸಿಂಬು, ಮಣಿರತ್ನಂ, ಅಭಿರಾಮಿ, ಅಶೋಕ್ ಸೆಲ್ವನ್, ತ್ರಿಷಾ ಸೇರಿದಂತೆ ಚಿತ್ರರಂಗದ ಹಲವು ತಾರೆಯರು ಭಾಗವಹಿಸಿದ್ದರು. ಥಗ್ ಲೈಫ್ ಚಿತ್ರದ ಜಿಂಗುಚ್ಚಾ ಬಿಡುಗಡೆ ಆಗಿದ್ದು, ಹಾಡಿನಲ್ಲಿ ಕಮಲ್, ಸಿಂಬು ಕಾಣಿಸಿಕೊಂಡಿದ್ದಾರೆ.





# ಕರಾವಳಿ ತರಂಗಿಣಿ ಸಿನಿ ತರಂಗಿಣಿ

## ಶಿವಣ್ಣನಿಗೆ ಬಾಲಾಜಿ ಮಾಧವನ್ ನಿರ್ದೇಶನ..



ಏಪ್ರಿಲ್ 24 ವರನಟ ಡಾ||ರಾಜಕುಮಾರ್ ಅವರ ಹುಟ್ಟುಹಬ್ಬ. ಈ ಸುಸಂದರ್ಭದಲ್ಲಿ ಕರುನಾಡ ಚಕ್ರವರ್ತಿ ಶಿವರಾಜಕುಮಾರ್ ಅವರು ನಾಯಕರಾಗಿ ನಟಿಸಲಿರುವ ನೂತನ ಚಿತ್ರದ ಘೋಷಣೆಯಾಗಿದೆ. ಶ್ರಿತಿಕ್ ಮೋಷನ್ ಪಿಕ್ಚರ್ಸ್ ಸಂಸ್ಥೆ ಲಾಂಛನದಲ್ಲಿ ಸಾಗರ್, ಕೃಷ್ಣ ಕುಮಾರ್ ಹಾಗೂ ಸೂರಜ್ ಶರ್ಮ ಈ ನೂತನ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಬಾಲಾಜಿ ಮಾಧವನ್ ನಿರ್ದೇಶನ ಮಾಡಲಿದ್ದಾರೆ. ಕನ್ನಡದಲ್ಲಿ ಮೊದಲ ಚಿತ್ರವನ್ನು ನಿರ್ದೇಶಿಸುತ್ತಿರುವ ಬಾಲಾಜಿ ಮಾಧವನ್, ಖ್ಯಾತ ನಿರ್ದೇಶಕ ಪಿ.ವಾಸು ಅವರ ಸಹೋದರಿಯ ಪುತ್ರ. ಇತ್ತೀಚೆಗೆ ಶಿವರಾಜಕುಮಾರ್ ಅವರನ್ನು ಭೇಟಿ ಮಾಡಿದ ಬಾಲಾಜಿ ಮಾಧವನ್ ಹಾಗೂ ನಿರ್ಮಾಪಕರಾದ ಸಾಗರ್, ಕೃಷ್ಣ ಕುಮಾರ್ ಮತ್ತು ಸೂರಜ್ ಶರ್ಮ ನೂತನ ಚಿತ್ರದ ಕುರಿತು ಶಿವಣ್ಣನಲ್ಲಿ ಮಾತನಾಡಿ ಸಂತಸ ವ್ಯಕ್ತ ಪಡಿಸಿದ್ದಾರೆ.

## ಫೈರ್ ಫ್ಲೈ ಸಿನಿಮಾಗೆ ಆಕ್ಷನ್ ಪ್ರಿನ್ಸ್ ಸಾಥ್..



ನಿವೇದಿತಾ ಶಿವರಾಜ್‌ಕುಮಾರ್ ನಿರ್ಮಾಣದ ಫೈರ್ ಫ್ಲೈ ಚಿತ್ರ ಏಪ್ರಿಲ್ 24ಕ್ಕೆ ತೆರೆಗೆ ಬಂದಿದೆ. ಸಿನಿಮಾ ಬಿಡುಗಡೆಗೆ ಮುಂಚಿತವಾಗಿ ಹಾಡನ್ನು ಬಿಡುಗಡೆ ಮಾಡಿದ ಧ್ರುವ ಸರ್ಜಾ ಇಡೀ ತಂಡಕ್ಕೆ ಶುಭಾಶಯ ಕೋರಿದ್ದಾರೆ. ಈ ಗೀತೆಯಲ್ಲಿ ಅಣ್ಣಾವ್ರ ಸಿನಿಮಾಗಳ ಡೈಲಾಗ್‌ಗಳನ್ನು ಬಳಸಿರುವುದು ಮತ್ತೊಂದು ವಿಶೇಷ. ಧನಂಜಯ್ ರಂಜನ್ ಕ್ಯಾಚಿ ವ್ಯಾಚಿ ಪದಗಳನ್ನು ಪೋಣಿಸಿ ಸಾಹಿತ್ಯ ಬರೆದಿದ್ದಾರೆ. ದೀಪಕ್ ಬ್ಲೂ ಮತ್ತು ಕಾರ್ತಿಕ್ ಚೆನ್ನೋಜಿರಾವ್ ಹಾಡಿಗೆ ಧ್ವನಿಯಾಗಿದ್ದು, ಚರಣ್ ರಾಜ್ ಮಸ್ತ್ ಟ್ಯೂನ್ ಹಾಕಿದ್ದಾರೆ. 'ಫೈರ್ ಫ್ಲೈ ಸಿನಿಮಾವನ್ನು ವಂಶಿ ನಟಿಸಿ, ನಿರ್ದೇಶಿಸಿದ್ದಾರೆ. ಇದು ಇವರ ಚೊಚ್ಚಲ ಪ್ರಯತ್ನ. ಚಿತ್ರದಲ್ಲಿ ಸುಧಾರಾಣಿ, ರಚನಾ ಇಂದರ್, ಅಚ್ಯುತ್ ಕುಮಾರ್, ಮೂಗು ಸುರೇಶ್, ಶೀತಲ್ ಶೆಟ್ಟಿ ಮುಂತಾದವರು ಅಭಿನಯಿಸಿದ್ದಾರೆ.

## ಡಿಫರೆಂಟ್ ಅವತಾರದಲ್ಲಿ ಯುವರಾಜ್ ಕುಮಾರ್!

ಕನ್ನಡ ಚಿತ್ರರಂಗದ ಭರವಸೆ ನಾಯಕ ಯುವರಾಜ್ ಕುಮಾರ್ ಹುಟ್ಟುಹಬ್ಬದ ಅಂಗವಾಗಿ ಬಿಡುಗಡೆಯಾಗಬೇಕಿದ್ದ ಯುವ ಟೀಸರ್ ಒಂದು ದಿನ ತಡವಾಗಿ ಅನಾವರಣ ಮಾಡಲಾಗಿದೆ. ಪಹಲ್ಗಾಮ ಉಗ್ರರ ದಾಳಿಯಲ್ಲಿ ತಮ್ಮ ಕುಟುಂಬದವರನ್ನು ಕಳೆದುಕೊಂಡವರಿಗೆ ಗೌರವ ಸೂಚಿಸುವ ಸಲುವಾಗಿ ಚಿತ್ರತಂಡ ಟೀಸರ್ ಬಿಡುಗಡೆ ಮುಂದೂಡಿತ್ತು. ಅಣ್ಣಾವ್ರ ಜನ್ಮದಿನದ ಜೊತೆಗೆ ಯುವರಾಜ್‌ಕುಮಾರ್ ಬರ್ತಡೇ ಸ್ಪೆಷಲ್ ಆಗಿಯೇ ಟೀಸರ್ ರಿಲೀಸ್ ಆಗಿದೆ. 1ನಿಮಿಷ 9ಸೆಕೆಂಡ್ ಇರುವ ಯುವ ಟೀಸರ್ ಸೈಕ್ ಆಗಿದೆ. ಹೊಸ ಅವತಾರದಲ್ಲಿ ಯುವರಾಜ್ ಕುಮಾರ್ ಎಂಟ್ರಿ ಕೊಟ್ಟಿದ್ದಾರೆ. ಮಗು–ಮೃಗ ಅಂತಾ ಮಸ್ತ್ ಡೈಲಾಗ್ ಹೊಡೆಯುತ್ತಾ ಕೈಯಲ್ಲಿ ಪೊರಕೆ ಹಿಡಿದು ವಿಭಿನ್ನ ಅವತಾರದಲ್ಲಿ ಕಾಣಿಸಿ ಕೊಂಡಿದ್ದಾರೆ. ಯುವ ಆಕ್ಟಿಂಗ್, ರೋಹಿತ್ ಪದಕಿ ಟೇಕಿಂಗ್, ಚರಣ್ ರಾಜ್ ಮ್ಯೂಸಿಕ್ ಕಿಕ್ ಟೀಸರ್ ತೂಕವನ್ನು ಮತ್ತಷ್ಟು ಹೆಚ್ಚಿಸಿದೆ.



## '69' ಚಿತ್ರಕ್ಕೆ ಹೃತಿಕ್ ರೋಶನ್ ಸಾಥ್..

ಚಿಕ್ಕಂದಿನಿಂದಲೂ ಬಾಲಿವುಡ್ ನಟ ಹೃತಿಕ್ ರೋಶನ್ ಅಭಿಮಾನಿಯಾಗಿರುವ ರಾಮ್ ಅವರ ಚಿತ್ರಗಳನ್ನು ನೋಡುತ್ತಾ, ತಾನು ಬಣ್ಣದಲೋಕಕ್ಕೆ ಬರಬೇಕೆಂಬ ತುಡಿತದೊಂದಿಗೆ ಶಿಕ್ಷಣ ಮುಗಿಸಿ ಅಮೇರಿಕಾದ ಕಂಪೆನಿ ಒಂದರಲ್ಲಿ ಟೆಕ್ಕಿಯಾಗಿ ಕೆಲಸ ಮಾಡುತ್ತಿದ್ದಾರೆ. ಮುಂದೆ 2022ರಲ್ಲಿ"ನಹಿ ಜ್ಞಾನೇನ ಸದೃಶಂ' ಚಿತ್ರಕ್ಕೆ ನಾಯಕ, ಸಾಹಿತ್ಯ, ನಿರ್ದೇಶನ ಮತ್ತು ನಿರ್ಮಾಣ ಮಾಡಿದ್ದು, ಪ್ರೇಕ್ಷಕರಿಂದ ಪ್ರಶಂಸೆ ಪಡೆದುಕೊಂಡಿತು. ಇದೇ ಹುಮ್ಮಸ್ಸಿನಿಂದ ಎರಡನೇ ಅನುಭವ ಎನ್ನುವಂತೆ 69 ಸಿನಿಮಾಕ್ಕೆ ನಾಲ್ಕು ಜವಬ್ದಾರಿಗಳನ್ನು ಹೊತ್ತುಕೊಂಡು, ಫ್ರೆಂಡ್ಸ್ ಫಂಡಡ್ ಫಿಲಿಂಸ್ ಮತ್ತು ವ್ಯಾಸ ಸ್ಟುಡಿಯೋ ಮೂಲಕ ಬಂಡವಾಳ ಹೂಡಿದ್ದಾರೆ. 'ಒಂದು ಕಾಲದ ಕಥೆ' ಎಂಬ ಅಡಿಬರಹ ಇಂಗ್ಲೀಷ್‌ನಲ್ಲಿ ಹೇಳಿಕೊಂಡಿದೆ. ಸದ್ಯ ರಾಮ್ ಅವರು ಯುಎಸ್‌ಎ ಕಂಪೆನಿಯಲ್ಲಿ ಟೆಕ್ಕಿಯಾಗಿದ್ದು, ಬಿಡುವಿನ ವೇಳೆಯಲ್ಲಿ ಸಿನಿಮಾ ಮಾಡಿ ಮುಗಿಸಿದ್ದಾರೆ.









Releasing by Likith Films Through Deva Films 9845169975


Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212